ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೫೭

# ಪಟ್ಟಿ – ೦೩

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

## ಬುಧವಾರ, ದಿನಾಂಕ : ೧೧ನೇ, ಜುಲೈ ೨೦೧೮

---

## ಸಮೂಹ – III

೧. ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೩. ಸಣ್ಣ ಕೈಗಾರಿಕೆ ಸಚಿವರು.

೪. ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು.

೫. ಕಾರ್ಮಿಕ ಸಚಿವರು.

೬. ಅರಣ್ಯ ಸಚಿವರು.

---

## ಕೊಪ್ಪ – ೧ನೇ ವೃತ್ತ ಕೇಂದ್ರ ಸ್ಥಾನ ಕೌಡ್ಲೆ ನಾಡಕಛೇರಿಯ ೧೩ ಗ್ರಾಮಗಳ ದಾಖಲೆಗಳನ್ನು ಕೊಪ್ಪ ನಾಡಕಛೇರಿಗೆ ವರ್ಗಾವಣೆ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೪ (೨೫೬) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಡ್ಲೆ ನಾಡಕಛೇರಿ ೧ನೇ ವೃತ್ತದಲ್ಲಿರುವ ೧೩ ಗ್ರಾಮಗಳು ಕೊಪ್ಪ ನಾಡಕಛೇರಿ ೨ನೇ ವೃತ್ತಕ್ಕೆ ಹತ್ತಿರವಾಗಿದ್ದು, ಈ ೧೩ ಗ್ರಾಮಗಳ ದಾಖಲೆಗಳನ್ನು ಕೊಪ್ಪ ನಾಡಕಛೇರಿ ೨ನೇ ವೃತ್ತ ಇಲ್ಲಿಗೆ ಈ ಹಿಂದೆ ವರ್ಗಾಯಿಸಲು ಕೋರಿದ್ದರೂ ಸಹ ಈವರೆಗೆ ಕ್ರಮಕೈಗೊಳ್ಳದಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಆ) ಸದರಿ ವಿಷಯದ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳು ಸುಮಾರು ೨ ವರ್ಷಗಳಿಂದ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದರೂ ಸಹ ಈ ಬಗ್ಗೆ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ;

(ಇ) ಸದರಿ ವಿಷಯದ ಬಗ್ಗೆ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸ್ಥಳಾಂತರಿಸುವ ಬಗ್ಗೆ ಕಾಲಮಿತಿಯನ್ನು ನಿಗಧಿ ಪಡಿಸಿದೆಯೇ ? (ವಿವರ ನೀಡುವುದು)

## ಕೌಶಲ್ಯಾಭಿವೃದ್ಧಿ/ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೫ (೨೫೪) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ; ಇಲಾಖೆಯ ಉದ್ದೇಶವೇನು ;

(ಆ) ಇಲಾಖೆ ವತಿಯಿಂದ ಈವರೆಗೆ ಎಷ್ಟು ಜನರಿಗೆ ಯಾವ ಯಾವ ವಿಭಾಗಗಳಲ್ಲಿ ತರಬೇತಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು) ಇಲಾಖೆಗೆ ಬಿಡುಗಡೆ ಆಗಿರುವ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ;

(ಇ) ಯುವ ಜನರನ್ನು ಗಮನದಲ್ಲಿಟ್ಟುಕೊಂಡು ಯಾವ್ಯಾವ ಹೊಸ ಕಾರ್ಯ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೬ (೨೫೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ, ಸಹಕಾರಿ ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳು ಯಾವುವು ; ಈ ಕಾರ್ಖಾನೆಗಳು ಕಳೆದ ೫ ವರ್ಷಗಳಿಂದ ಪಡೆದ ಲಾಭ ಮತ್ತು ನಷ್ಟದ ಪ್ರಮಾಣದ ಪೂರ್ಣ ಮಾಹಿತಿ ನೀಡುವುದು ;

(ಆ) ಈ ಕಾರ್ಖಾನೆಗಳು ಪ್ರತಿ ವರ್ಷ ಕಬ್ಬು ನುರಿಸಿದ ಪ್ರಮಾಣ, ಸಕ್ಕರೆ ಉತ್ಪಾದನೆ ಪ್ರಮಾಣ, ಸಕ್ಕರೆ ಇಳುವರಿ ಪ್ರಮಾಣ ಮತ್ತು ಕಬ್ಬು ನುರಿಸಿದ ದಿನಗಳೆಷ್ಟು ; ಕಳೆದ ೫ ವರ್ಷಗಳ ಪೂರ್ಣ ಮಾಹಿತಿ ನೀಡುವುದು ;

(ಇ) ಕರ್ನಾಟಕ ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಉಪ ಉತ್ಪನ್ನಗಳಾದ 1) Bayasse, 2) Molasses, 3) Press mad, 4) Ethanol, 5) Alcohal ಇವುಗಳ ಉತ್ಪಾದನೆ ಮತ್ತು ಮಾರಾಟದ ಪ್ರಮಾಣ ಎಷ್ಟು ; ಕಳೆದ ೫ ವರ್ಷಗಳ ಪೂರ್ಣ ಮಾಹಿತಿ ನೀಡುವುದು;

(ಈ) ರಾಜ್ಯದಲ್ಲಿರುವ ಸರ್ಕಾರಿ, ಸಹಕಾರಿ ಮತ್ತು ಖಾಸಗಿ ಸಕ್ಕರೆ ಕಂಪನಿಗಳಲ್ಲಿ "Co-generation" ಘಟಕದ ಮೂಲಕ ಮಾಡುವ ವಿದ್ಯುತ್ ಉತ್ಪಾದನೆ ಮತ್ತು ಮಾರಾಟದ ಪ್ರಮಾಣ ಎಷ್ಟು ; (ಕಳೆದ ೫ ವರ್ಷಗಳ ಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿರುವ ಸರ್ಕಾರಿ, ಸಹಕಾರಿ ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ನುರಿಯುವ ಸಾಮರ್ಥ್ಯ ಎಷ್ಟು ; ಉಪ ಉತ್ಪನ್ನಗಳ ಉತ್ಪಾದನ ಘಟಕಗಳ ಸಂಖ್ಯೆ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಮಾನ್ವಿ ಪಟ್ಟಣದಲ್ಲಿ "ಟ್ರಿ" ಪಾರ್ಕ್‌ನ ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೭ (೨೪೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ "ಟ್ರಿ" ಪಾರ್ಕ್ ನಿರ್ಮಾಣ ಯಾವ ಹಂತದಲ್ಲಿದೆ ; ಇದನ್ನು ಯಾವಾಗ ಪೂರ್ಣಗೊಳಿಸಲಾಗುವುದು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಅರಣ್ಯ ಪ್ರದೇಶ ಎಷ್ಟು ; ಅದನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಅರಣ್ಯ ಹೆಚ್ಚಿಸಲು ೨೦೧೮–೧೯ನೇ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳೇನು ?

## ರಾಯಚೂರು ನಗರದಲ್ಲಿ ಆಟೋನಗರ ನಿರ್ಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೮ (೨೪೮) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಯಚೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಮತ್ತು ಆಟೋನಗರ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಯಚೂರು ನಗರದಲ್ಲಿ ವಿವಿಧ ಸರ್ಕಾರಿ ಕಟ್ಟಡಗಳಿಗೆ ಭೂಮಿ ಮಂಜೂರು ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೯ (೨೪೪) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲಾ ಆಡಳಿತ ಭವನ ಕಟ್ಟಡ ನಿರ್ಮಾಣ ಯಾವ ಹಂತದಲ್ಲಿದೆ ;

(ಆ) ರಾಯಚೂರು ನಗರದಲ್ಲಿ ನೂತನ ಈದ್ಗಾ ಮೈದಾನ ನಿರ್ಮಾಣಕ್ಕೆ ವಕ್ಫ್ ಬೋರ್ಡ್‌ನಿಂದ ಸ್ಥಳದ ಪ್ರಸ್ತಾವನೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ನೂತನ ಈದ್ಗಾ ಭೂಮಿ ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಯಚೂರು ನಗರದಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ನಿರ್ಮಾಣವಾದ ಮನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೦ (೨೪೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ನಿರ್ಮಾಣವಾದ ಮನೆಗಳು ಮತ್ತು ನಿವೇಶನಗಳನ್ನು ವಿತರಣೆ ಮಾಡಲು ರೂಪಿಸಿರುವ ಮಾನದಂಡಗಳೇನು ; ಅವುಗಳನ್ನು ಯಾವಾಗ ವಿತರಣೆ ಮಾಡಲಾಗುತ್ತದೆ ;

(ಆ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಕೈಗಾರಿಕೆ ಪ್ರದೇಶ ನಿರ್ಮಾಣ ಮಾಡುವ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇದೆಯೇ ?

## ಚಾರ್‌ಧಾಮ್ ಯಾತ್ರಾರ್ಥಿಗಳಿಗೆ ಸಹಾಯಧನ ಮಂಜೂರು ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೧ (೨೪೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಿಂದ ಸಾವಿರಾರು ಭಕ್ತರು ಉತ್ತರಾಖಂಡ ರಾಜ್ಯದಲ್ಲಿನ "ಚಾರ್‌ಧಾಮ್"ಗಳಿಗೆ ಯಾತ್ರೆ ಕೈಗೊಳ್ಳುತ್ತಿದ್ದು, ಸೂಕ್ತ ವಸತಿ, ಮಾರ್ಗದರ್ಶನ ಮುಂತಾದ ಮೂಲಭೂತ ಸೌಲಭ್ಯಗಳಿಲ್ಲದೆ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುವುದು ;

(ಇ) ಚಾರ್‌ಧಾಮ್ ಯಾತ್ರಾರ್ಥಿಗಳಿಗೆ ಸಹಾಯಧನ ನೀಡಲಾಗುತ್ತಿರುವ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಕಾರಣಗಳೇನು ;

(ಈ) ಸಹಾಯಧನ ಯೋಜನೆಗಳಿಗೆ ಹೆಚ್ಚಿನ ಅನುದಾನ ಒದಗಿಸಿ ಪ್ರತಿಯೊಬ್ಬ ಯಾತ್ರಾರ್ಥಿಗೂ ಕನಿಷ್ಠ ೨೫,೦೦೦/–ರೂ.ಗಳ ಸಹಾಯಧನ ನೀಡಲಾಗುವುದೇ ;

(ಉ) ಲಾಟರಿ ವ್ಯವಸ್ಥೆ ಕೈಬಿಟ್ಟು ಪ್ರತಿಯೊಬ್ಬರಿಗೂ ಸಹಾಯಧನ ಮಂಜೂರು ಮಾಡಲಾಗುವುದೇ ?

## ಕಂದಾಯ ಇಲಾಖೆಯ ಪಾಳು ಭೂಮಿ, ಕಲ್ಲು ಬಂಜರು, ಕೃಷಿ ಬೇಸಾಯ ಭೂಮಿ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೪೨ (೨೪೩) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಜಮೀನು ಅಂದರೇನು ; ಇದರಲ್ಲಿ ಎಷ್ಟು ವಿಧ ; ಅವು ಯಾವುವು ; (ವಿವರವಾದ ಮಾಹಿತಿಯೊಂದಿಗೆ ವಿವರ ನೀಡುವುದು)

(ಆ) ಪಾಳು ಭೂಮಿ, ಕಲ್ಲು ಬಂಜರು ಮತ್ತು ಕೃಷಿ ಬೇಸಾಯ ಮಾಡಲು ಯೋಗ್ಯವಲ್ಲದ್ದು ಅಂದರೆ ಯಾವ ಜಮೀನು ; (ವಿವರವಾದ ಮಾಹಿತಿ ಒದಗಿಸುವುದು)

(ಇ) ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ಕಸಬಾ ಹೋಬಳಿ ಸುರುಗೇನಹಳ್ಳಿ, ಬೆಟ್ಟದಿಂದ ಮುಂದಕ್ಕೆ ಕೊಡಗೇಹಳ್ಳಿ ಗ್ರಾಮದ ಅಡ್ಡ ರಸ್ತೆವರೆಗೆ ಇರುವ ಕಲ್ಲು ಬಂಜರು ಜಮೀನು ಎಷ್ಟಿದೆ ; ಇದು ಯಾವ ಯಾವ ಗ್ರಾಮಗಳ ಸರ್ವೆ ನಂಬರ್‌ಗಳಲ್ಲಿ ನಮೂದಾಗಿದೆ ; (ವಿವರವಾದ ಸರ್ವೆ ನಂಬರ್, ಎಕರೆ, ಗ್ರಾಮಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಈ) ಈ ಕಲ್ಲು ಬಂಜರು ಜಮೀನು ಹಣ್ಣಿನ ಗಿಡ ಮತ್ತು ಜೈವಿಕ ಇಂಧನ ಸಸಿಗಳನ್ನು ಬೆಳೆಯಲು ಸೂಕ್ತವಾಗಿದೆಯೇ ? (ವಿವರವಾದ ಮಾಹಿತಿ ಕೊಡುವುದು)

## ಬಾಲಕಾರ್ಮಿಕರ ನಿರ್ಮೂಲನೆಗಾಗಿ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೩ (೨೩೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಲಕಾರ್ಮಿಕರನ್ನು ನೇಮಿಸಿಕೊಳ್ಳಬಾರದೆಂದು ನಿಯಮಗಳಿದ್ದರೂ, ಬೆಂಗಳೂರು ನಗರದಲ್ಲಿ ಬಾಲಕಾರ್ಮಿಕರ ಸಂಖ್ಯೆ ಹೆಚ್ಚಾಗಿರಲು ಕಾರಣವೇನು ;

(ಆ) ಬಾಲಕಾರ್ಮಿಕರ ನೇಮಕವನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; ಇಲಾಖಾಧಿಕಾರಿಗಳು ತಪಾಸಣೆ ಮಾಡಿ ಕ್ರಮ ಕೈಗೊಳ್ಳಲು ವಿಫಲರಾಗಿದ್ದು, ಅಂತಹ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೇ ;

(ಇ) ಇನ್ನು ಮುಂದಾದರೂ ಬಾಲ ಕಾರ್ಮಿಕರ ನಿರ್ಮೂಲನೆಗಾಗಿ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದೇ ?

## ಕೌಶಲ್ಯಾಭಿವೃದ್ಧಿ ಇಲಾಖೆಗೆ ಹಸ್ತಾಂತರಗೊಂಡಿರುವ ವಯಸ್ಕರ ಶಿಕ್ಷಣ ಸಮಿತಿ ನೌಕರರಿಗೆ ವೇತನ ನೀಡದಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೪ (೨೩೦) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಯಸ್ಕರ ಶಿಕ್ಷಣ ಸಮಿತಿ ನೌಕರರ ಸೇವೆಯನ್ನು ಕೌಶಲ್ಯಾಭಿವೃದ್ಧಿ ಇಲಾಖೆಗೆ ಯಾವಾಗ ಹಸ್ತಾಂತರಿಸಲಾಯಿತು ಹಾಗೂ ಎಷ್ಟು ಜನರನ್ನು ಹಸ್ತಾಂತರಿಸಲಾಯಿತು ;

(ಆ) ಹಸ್ತಾಂತರಗೊಂಡಿರುವ ಅನೇಕ ನೌಕರರಿಗೆ ವೇತನ ಮತ್ತಿತರ ಸೇವಾ ಸೌಲಭ್ಯಗಳನ್ನು ಇದುವರೆಗೆ ನೀಡಿಲ್ಲದಿರುವುದು ನಿಜವೇ;

(ಇ) ಎಷ್ಟು ದಿನಗಳಲ್ಲಿ ಈ ಸಮಸ್ಯೆಯನ್ನು ಬಗೆ ಹರಿಸಲಾಗುವುದು?

## ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೫ (೨೨೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಇದುವರೆಗೂ ರಾಷ್ಟ್ರೀಯ ಸ್ವಾಸ್ಥ ಭೀಮಾ ಯೋಜನೆಯಡಿ ವಿಮಾ ಸೌಲಭ್ಯಕ್ಕಾಗಿ ಎಷ್ಟು ಕಾರ್ಮಿಕರುಗಳು ನೋಂದಣಿ ಮಾಡಿಸಿದ್ದಾರೆ ; ಈ ಯೋಜನೆಗೆ ಯಾವ ಯಾವ ಕಾರ್ಮಿಕರುಗಳು ಒಳಪಡುತ್ತಾರೆ ; ಅವರುಗಳಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲು ಬಾಕಿ ಇರುವ ಕಾರ್ಮಿಕರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬಾಕಿ ಇರುವ ಕಾರ್ಮಿಕರುಗಳಿಗೆ ಸ್ಮಾರ್ಟ್ ಕಾರ್ಡ್ ನೀಡಲು ವಿಳಂಬವಾಗುತ್ತಿರಲು ಕಾರಣಗಳೇನು ;

(ಇ) ಸರ್ಕಾರವು ಕಾರ್ಮಿಕರ ಅಭಿವೃದ್ಧಿಗಾಗಿ ರೂಪಿಸಿರುವ ಕಾರ್ಯಕ್ರಮಗಳ ವಿವರ ನೀಡುವುದು ; ಈ ಕಾರ್ಯಕ್ರಮಗಳಿಗಾಗಿ ಕಳೆದ ೩ ವರ್ಷಗಳಲ್ಲಿ ನಿಗಧಿಗೊಳಿಸಿರುವ ಹಾಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರಗಳನ್ನು ನೀಡುವುದು)

## ಸಣ್ಣ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೬ (೨೧೯) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ಸಣ್ಣ ಕೈಗಾರಿಕೆಗಳಿಗೆ ಯಾವ ರೀತಿಯಲ್ಲಿ ನೆರವನ್ನು ನೀಡುತ್ತಿದೆ ; ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗಧಿಪಡಿಸಿರುವ ಮಾನದಂಡಗಳೇನು ;

(ಆ) ಹಾಸನ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಕೈಗಾರಿಕೆವಾರು ಪೂರ್ಣ ಮಾಹಿತಿ ನೀಡುವುದು) ಹಾಸನ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳಿಂದ ಸ್ವಯಂ ಉದ್ಯೋಗಿಗಳಾದವರ ಸಂಖ್ಯೆ ಎಷ್ಟು ;

(ಇ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದಲ್ಲಿ ಸ್ವಯಂ ಉದ್ಯೋಗಗಳನ್ನು ಹೆಚ್ಚಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ, ಯಾವ ರೀತಿ ಸ್ವಯಂ ಉದ್ಯೋಗಗಳನ್ನು ಹೆಚ್ಚಿಸಲಾಗುವುದು ? (ವಿವರ ನೀಡುವುದು)

## ಅರಣ್ಯದಂಚಿನಲ್ಲಿ ವಾಸಿಸುವವರಿಗೆ ಎಲ್‌ಪಿಜಿ ಸಿಲಿಂಡರ್ ವಿತರಣೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೭ (೨೩೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಅರಣ್ಯ ಪ್ರದೇಶದ ಅಂಚಿನಲ್ಲಿ ವಾಸಿಸುತ್ತಿರುವವರಿಗೆ ಎಲ್.ಪಿ.ಜಿ. ಸಿಲಿಂಡರ್ ವಿತರಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಯೋಜನೆಯ ಪ್ರಯೋಜನವನ್ನು ಹಾಸನ ಜಿಲ್ಲೆಯ ಯಾವ ಯಾವ ಗ್ರಾಮಗಳು ಪಡೆಯುತ್ತಿವೆ ; (ವಿವರ ನೀಡುವುದು)

(ಆ) ಈ ಯೋಜನೆಗೆ ಸರ್ಕಾರದಿಂದ ಪ್ರತಿ ಎಲ್.ಪಿ.ಜಿ ಸಿಲಿಂಡರ್‌ಗೆ ನಿಗಧಿಪಡಿಸಿರುವ ಬೆಲೆ ಎಷ್ಟು ; ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಈ ಯೋಜನೆಗೆ ಕಳೆದ ೩ ವರ್ಷಗಳಿಂದ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಎಷ್ಟು ಫಲಾನುಭವಿಗಳಿಗೆ ವಿತರಣೆ ಮಾಡಲಾಗಿದೆ ; (ವಿವರಗಳನ್ನು ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಆನೆ ಹಾವಳಿಯಿಂದ ಸಾರ್ವಜನಿಕರು ತೊಂದರೆಗೀಡಾಗಿರುವ ಪ್ರಕರಣಗಳೆಷ್ಟು ; ಇದರಿಂದ ಉಂಟಾಗಿರುವ ನಷ್ಟದ ಪ್ರಮಾಣವೇನು ; ಸರ್ಕಾರವು ನೀಡಿರುವ ಪರಿಹಾರದ ಮೊತ್ತವೆಷ್ಟು ? (ಪ್ರಕರಣವಾರು/ ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೮ (೨೨೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಇರುವಂತಹ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿಗಳಿಗೆ ಕಳೆದ ೩ ವರ್ಷಗಳಲ್ಲಿ ನಿಗಧಿಗೊಳಿಸಿರುವ ಹಾಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಇರುವಂತಹ ಮುಜರಾಯಿ ದೇವಸ್ಥಾನಗಳಿಂದ ಕಳೆದ ೩ ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು? (ದೇವಸ್ಥಾನವಾರು ವಿವರ ನೀಡುವುದು)

## ಮಹತ್ತರ ಯೋಜನೆಗಳಿಗೆ ಭೂ ಮಂಜೂರಾತಿ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೪೯ (೨೨೧) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ, ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಸರ್ಕಾರದ ಮಹತ್ತರವಾದ ಯೋಜನೆಗಳ ಅನುಷ್ಠಾನಕ್ಕೆ ಭೂ ಮಂಜೂರಾತಿಗಾಗಿ ಎಷ್ಟು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ; (ಭೂ ಮಂಜೂರಾತಿಗಾಗಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗಳ ವಿವರಗಳನ್ನು ಯೋಜನೆವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಭೂಮಿ ಮಂಜೂರಾತಿ ಮಾಡಲು ವಿಳಂಬವಾಗುತ್ತಿರುವುದರಿಂದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಭೂ ಮಂಜೂರಾತಿ ಮಾಡಲು ಸರ್ಕಾರ ಕಾಲಮಿತಿಯೇನಾದರೂ ವಿಧಿಸಿದೆಯೇ; ಹಾಗಿದ್ದಲ್ಲಿ, ಈಗಾಗಲೇ ಸಲ್ಲಿಸಿದ ಪ್ರಸ್ತಾವನೆಗಳಿಗೆ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು;

(ಇ) ಸರ್ಕಾರಿ ಯೋಜನೆಗಳಿಗೆ ಭೂಮಿ ಮಂಜೂರು ಮಾಡಲು ನಿಗಧಿಪಡಿಸಿರುವ ಮಾನದಂಡಗಳೇನು; ಹಾಗೂ ಮಂಜೂರಾತಿ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪ್ರಕೃತಿ ವಿಕೋಪದಿಂದ ಉಂಟಾದ ನಷ್ಟಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೧೫೦ (೨೫೮) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಕೃತಿ ವಿಕೋಪದಿಂದ ಎಷ್ಟು ಸಾವುಗಳು ಸಂಭವಿಸಿದೆ; ಎಷ್ಟು ಪರಿಹಾರ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಪ್ರಕೃತಿ ವಿಕೋಪದಿಂದ ಉಂಟಾದ ನಷ್ಟ ಎಷ್ಟು; ಯಾವ ಮಾನದಂಡದಲ್ಲಿ ಪರಿಹಾರ ನೀಡಲಾಗಿದೆ;

(ಇ) ಕೃತಕ ನೆರೆಯಿಂದ ಮನೆಯೊಳಗಿನ ಸಾಮಾನುಗಳು ನಷ್ಟಗೊಂಡರೂ ಪರಿಹಾರ ಮಾತ್ರ ₹. ೩೦೦೦/– ಗಿಂತ ಕಡಿಮೆ ನೀಡಿದೆ ಎಂಬ ದೂರುಗಳಿದ್ದರೂ ಹೆಚ್ಚು ಪರಿಹಾರ ನೀಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು;

(ಈ) ನಿಗಧಿತ ಪರಿಹಾರಗಿಂತ ಹೆಚ್ಚು ಪರಿಹಾರ ನೀಡಲು ಇಲಾಖೆ ಎಷ್ಟು ಹಣ ಬಿಡುಗಡೆ ಮಾಡಿದೆ; ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ ಎಷ್ಟು; (ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಪ್ರಕೃತಿ ವಿಕೋಪದಿಂದ ಉಂಟಾದ ನಷ್ಟ ಎಷ್ಟು ; ಸಾವಿನ ಸಂಖ್ಯೆ ಎಷ್ಟು; ನೀಡಿದ ಪರಿಹಾರ ಎಷ್ಟು; ನೀಡಬೇಕಾದ ಪರಿಹಾರ ಎಷ್ಟು? (ವಿವರ ನೀಡುವುದು)

## ರಾಜ್ಯದಲ್ಲಿ ಅರಣ್ಯ ಪ್ರದೇಶಗಳಲ್ಲಿ ವಾಸವಾಗಿರುವ ಕೂಲಿ ಕಾರ್ಮಿಕರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೧೫೧ (೨೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ವಾಸವಾಗಿರುವ ಕೂಲಿ ಕಾರ್ಮಿಕರಿಗೆ ಹಕ್ಕುಪತ್ರ ನೀಡಬೇಕೆಂಬ ಬೇಡಿಕೆಯನ್ನು ಪೂರೈಸದೆ ಇರಲು ಕಾರಣಗಳೇನು; ಎಷ್ಟು ಅನಧಿಕೃತ ಕುಟುಂಬಗಳು ಅರಣ್ಯ ಪ್ರದೇಶದಲ್ಲಿ ವಾಸವಾಗಿದ್ದಾರೆ; (ವಿವರ ನೀಡುವುದು)

(ಆ) ಅರಣ್ಯದಲ್ಲಿ ಭೇಟಿಯಾಗುತ್ತಿರುವುದನ್ನು ತಪ್ಪಿಸಲು ಇಲಾಖೆ ಕೈಗೊಂಡ ಕ್ರಮಗಳೇನು; ಎಷ್ಟು ಕಳ್ಳ ಭೇಟಿಗಾರರ ಮೇಲೆ ಕೇಸು ದಾಖಲಿಸಲಾಗಿದೆ; (ವಿವರ ನೀಡುವುದು)

(ಇ) "ಡೀಮ್ಡ್ ಫಾರೆಸ್ಟ್" ಸ್ಥಳಗಳಲ್ಲಿ ಯಾವುದೇ ಮರಮಟ್ಟಗಳು ಇಲ್ಲದೇ ಇದ್ದರೂ ದಾಖಲೆಗಳಲ್ಲಿ ಮಾತ್ರ ಇರುವುದನ್ನು ಇಲಾಖೆ ಗಮನಿಸಿದೆಯೇ; ಈ ಬಗ್ಗೆ ಅರಣ್ಯ ಪ್ರದೇಶ ಅಲ್ಲದ ಸ್ಥಳಗಳಲ್ಲಿ ಅನಧಿಕೃತವಾಗಿ ಅನುಮತಿ ಪಡೆಯದೆ ವಾಸಿಸುತ್ತಿರುವವರಿಗೆ ತೊಂದರೆಗಳಾಗುವುದನ್ನು ತಪ್ಪಿಸಲು ಇಲಾಖೆ ಕೈಗೊಂಡಿರುವ ಕ್ರಮವೇನು;

(ಈ) ಅರಣ್ಯ ಇಲಾಖೆ ಸುಪರ್ದಿಯಲ್ಲಿರುವ ಜಂಗಲ್ ರೆಸಾರ್ಟ್ ಉದ್ದಿಮೆ ಲಾಭದಲ್ಲಿದೆಯೇ; ರಾಜ್ಯದಲ್ಲಿ ಎಷ್ಟು ರೆಸಾರ್ಟ್‌ಗಳಿವೆ; ಅವುಗಳಿಂದ ಬರುವ ಆದಾಯ ಎಷ್ಟು? (ವಿವರ ನೀಡುವುದು)

## ರಾಜ್ಯದಲ್ಲಿ ಆನೆಯ ಹಾವಳಿಯಿಂದ ಕೃಷಿ ನಷ್ಟಕ್ಕೆ ಗುರಿಯಾದ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೧೫೨ (೨೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗುರುತಿಸಿರುವ ಒಟ್ಟು ಆನೆಗಳ ಸಂಖ್ಯೆ ಎಷ್ಟು; ಯಾವ ಯಾವ ಪ್ರದೇಶದಲ್ಲಿ ಆನೆಗಳಿವೆ ಎಂದು ಗುರುತಿಸಲಾಗಿದೆ;

(ಆ) ಆನೆಯ ಹಾವಳಿಯಿಂದ ಕೃಷಿ ನಷ್ಟಕ್ಕೆ ಗುರಿಯಾದ ರೈತರಿಗೆ ಪರಿಹಾರ ಒದಗಿಸಲಾಗಿದೆಯೇ; ಒದಗಿಸಿದ್ದಲ್ಲಿ ಎಷ್ಟು ಪರಿಹಾರ ನೀಡಲಾಗಿದೆ; (ವಿವರ ನೀಡಲಾಗುವುದು)

(ಇ) ಆನೆಯ ಆಕ್ರೋಶಕ್ಕೆ ಎಷ್ಟು ಮನುಷ್ಯರು ಸಾವನ್ನಪ್ಪಿದ್ದಾರೆ; ಆ ಕುಟುಂಬಗಳಿಗೆ ಪರಿಹಾರ ನೀಡಲಾಗಿದೆಯೇ; ಆನೆಗಳು ನಾಡಿಗೆ ಬರದಂತೆ ತಡೆಯಲು ಇಲಾಖೆ ಕೈಗೊಂಡ ಕ್ರಮಗಳೇನು; ಇದಕ್ಕಾಗಿ ಇಲಾಖೆ ಖರ್ಚು ಮಾಡಿದ ಹಣ ಎಷ್ಟು; ಯಾವ ಮಾದರಿಯಲ್ಲಿ ತಡೆ ಬೇಲಿಗಳನ್ನು ರಚಿಸಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೫೩ (೨೨೭) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ, ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಕೌಶಲ್ಯಾಭಿವೃದ್ಧಿ ಕೇಂದ್ರಗಳಿವೆ; ವರ್ಷವೊಂದರಲ್ಲಿ ಎಷ್ಟು ಮಂದಿ ಯುವಕ/ಯುವತಿಯರಿಗೆ ತರಬೇತಿ ನೀಡಲಾಗುತ್ತದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಉದ್ಯೋಗ ಮೇಳಗಳನ್ನು ನಡೆಸಲಾಗುತ್ತಿದೆಯೇ; ೨೦೧೫–೧೬ ಮತ್ತು ೨೦೧೬–೧೭ರಲ್ಲಿ ನಡೆಸಿದ ಉದ್ಯೋಗ ಮೇಳ ಎಷ್ಟು; ನೀಡಿದ ಉದ್ಯೋಗ ಎಷ್ಟು; (ವಿವರ ನೀಡುವುದು)

(ಇ) ಉದ್ಯೋಗ ಸೃಷ್ಟಿಗಾಗಿ ಇಲಾಖೆ ಮುಂದಿರುವ ಯೋಜನೆಗಳಾವುವು; ವೃತ್ತಿಪರ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ನೀಡಲು ಕಾಲೇಜುಗಳಲ್ಲಿಯೇ ಮಾರ್ಗದರ್ಶನ ಸೆಂಟರ್ ಸ್ಥಾಪಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ ವಿವರ ನೀಡುವುದು;

(ಈ) ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಗೆ ಖರ್ಚು ಮಾಡಿದ ಒಟ್ಟು ಹಣ ಎಷ್ಟು; ತರಬೇತಿ ನೀಡುತ್ತಿರುವ ಉಪನ್ಯಾಸಕರು ಎಷ್ಟು? (ವಿವರ ನೀಡುವುದು)

# ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೫೪ (೨೨೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸಲು ಇಲಾಖೆ ನೀಡುತ್ತಿರುವ ಪ್ರೋತ್ಸಾಹಗಳೇನು; ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸಿದ ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡಬೇಕೆಂಬ ನಿಯಮ ಇದ್ದರೂ ನಿಯಮ ಉಲ್ಲಂಘಿಸಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು)

(ಆ) ರಾಜ್ಯದಲ್ಲಿ ೨೦೧೮–೧೯ನೇ ಸಾಲಿನಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಖಾಸಗಿ ಕೈಗಾರಿಕೆಗಳಾವುವು; ಸರ್ಕಾರದಿಂದ ನೀಡುವ ಪ್ರೋತ್ಸಾಹಗಳೇನು; ಎಷ್ಟು ಉದ್ಯೋಗ ಸೃಷ್ಟಿ ಮಾಡಲು ಇಲಾಖೆ ಮುಂದೆ ಪ್ರಸ್ತಾವನೆ ಇದೆ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಪಿಲಿಕುಳ ನಿಸರ್ಗಧಾಮದಲ್ಲಿರುವ ವಿಜ್ಞಾನ ಕೇಂದ್ರ ಮತ್ತು ೩ಡಿ ತಾರಾಲಯಗಳಲ್ಲಿ ಎಷ್ಟು ಮಂದಿ ೨೦೧೬–೧೭ ಮತ್ತು ೨೦೧೭–೧೮ರಲ್ಲಿ ವೀಕ್ಷಣೆ ಮಾಡಿದ್ದಾರೆ; ಇಲ್ಲಿ ಖರ್ಚು ಮಾಡಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಈ) ವೀಕ್ಷಣೆಗೆ ಎಷ್ಟು ಪ್ರವೇಶ ದರವನ್ನು ವಿಧಿಸಲಾಗಿದೆ; ಇಡಿ ತಾರಾಲಯ ಗುತ್ತಿಗೆಯನ್ನು ನಿಯಮ ಮೀರಿ ನೀಡಲಾಗುತ್ತಿದೆ ಎಂಬ ದೂರು ಇದ್ದು. ಈ ಬಗ್ಗೆ ಇಲಾಖೆ ತನಿಖೆ ನಡೆಸಿದೆಯೇ? (ವಿವರ ನೀಡುವುದು)

## ಧಾರ್ಮಿಕ ದತ್ತಿ ಇಲಾಖೆಯಡಿ ಬರುವ ದೇವಸ್ಥಾನಗಳಿಂದ ಬರುವ ಆದಾಯದ ಬಳಕೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫ (೨೭೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿ ಬರುವ ದೇವಸ್ಥಾನಗಳಲ್ಲಿ ದೇಣಿಗೆ ಹಾಗೂ ಕಾಣಿಕೆ ರೂಪದಲ್ಲಿ ಹಣ ಸಂಗ್ರಹಿಸಲಾಗುತ್ತಿದೆಯೇ;

(ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಧಾರ್ಮಿಕ ದತ್ತಿ ಇಲಾಖೆ ಅಧೀನದಲ್ಲಿರುವ "ಎ" ಶ್ರೇಣಿ ದೇವಾಲಯಗಳಲ್ಲಿ ದೇಣಿಗೆ/ಕಾಣಿಕೆ ರೂಪದಲ್ಲಿ ಸಂಗ್ರಹವಾಗಿರುವ ಒಟ್ಟು ಹಣವೆಷ್ಟು; (ದೇವಸ್ಥಾನಗಳು ಹಾಗೂ ಸಂಗ್ರಹವಾದ ಮೊತ್ತದ ವಿವರ ನೀಡುವುದು)

(ಇ) ಭಕ್ತಾಧಿಗಳ ದೇಣಿಗೆಯಿಂದ ಸಂಗ್ರಹವಾದ ಹಣವನ್ನು ಯಾವ ರೀತಿಯ ಚಟುವಟಿಕೆಗಳಿಗೆ ಉಪಯೋಗಿಸಲಾಗುತ್ತಿದೆ; ಎಷ್ಟೆಷ್ಟು ವಿನಿಯೋಗಿಸಲಾಗಿದೆ; (ವಿವರ ನೀಡುವುದು)

(ಈ) ಸಂಗ್ರಹವಾದ ದೇಣಿಗೆಯಿಂದ ರಾಜ್ಯದಲ್ಲಿರುವ ದೇವಸ್ಥಾನಗಳ ಪುನರುತ್ಥಾನದ/ ಜೀರ್ಣೋದ್ಧಾರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಉ) ಧಾರ್ಮಿಕ ದತ್ತಿ ಇಲಾಖೆಯ ಅಧೀನದಲ್ಲಿರುವ ದೇವಸ್ಥಾನಗಳ ಅರ್ಚಕ ಸಿಬ್ಬಂದಿಗಳಿಗೆ ಯಾವ ಸೇವಾ ಸೌಲಭ್ಯಗಳನ್ನು ನೀಡಲಾಗುತ್ತಿದೆ? (ವಿವರ ನೀಡುವುದು)

## ಕೇಂದ್ರ ಸರ್ಕಾರ ನಿಗಧಿಪಡಿಸಿರುವ ಎಫ್ ಆರ್ ಪಿ ದರದಲ್ಲಿ ಕಬ್ಬಿನ ಬಾಕಿ ಪಾವತಿಸದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೬ (೨೭೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರ ಕಬ್ಬಿಗೆ ವೈಜ್ಞಾನಿಕವಾಗಿ ಕೇಂದ್ರ ಸರ್ಕಾರ ನಿಗಧಿಪಡಿಸಿರುವ ಎಫ್ ಆರ್ ಪಿ ಬೆಲೆ ನಿಗಧಿ ಮಾಡಲು ಸರ್ಕಾರ ವಿಫಲವಾಗಿರುವ ಮತ್ತು ಸದರಿ ದರದಲ್ಲಿ ರೈತರ ಕಬ್ಬಿಗೆ ಕಾರ್ಖಾನೆಗಳು ಬಾಕಿ ಪಾವತಿಸದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ದರದಂತೆ ರೈತರ ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡಲು ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ; ಕಬ್ಬು ಅರೆಯುವ ಕಾರ್ಖಾನೆಗಳಿಂದ ರೈತರಿಗೆ ಕಬ್ಬಿನ ಬಾಕಿ ಬಿಲ್ ಪಾವತಿಸಲು ಏನೇನು ಕ್ರಮಗಳನ್ನು ಕೈಗೊಂಡಿದ್ದೀರಿ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ೨೦೧೫-೧೬, ೨೦೧೬-೧೭ ಹಾಗೂ ೨೦೧೭-೧೮ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ನಿಗಧಿಪಡಿಸಿರುವ ಎಫ್ ಆರ್ ಪಿ ದರದಲ್ಲಿ ಪಾವತಿಸಲು ಬಾಕಿ ಉಳಿಸಿಕೊಂಡಿರುವ ಒಟ್ಟು ಮೊತ್ತವೆಷ್ಟು; ಯಾವ್ಯಾವ ಕಾರ್ಖಾನೆಗಳು ಎಷ್ಟೆಷ್ಟು ಬಾಕಿ ಉಳಿಸಿಕೊಂಡಿವೆ; (ಸಂಪೂರ್ಣ ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ರೈತರ ಕಬ್ಬಿನ ಬಾಕಿ ಹಣವನ್ನು ಪೂರ್ಣವಾಗಿ ಪಾವತಿಸಲಾಗುವುದು?

## ರಾಜ್ಯದ ಮಹಾನಗರಗಳಲ್ಲಿ ಕೈಗಾರಿಕಾಭಿವೃದ್ಧಿಗೆ ವಶಪಡಿಸಿಕೊಂಡ ರೈತರ ಉಳಿದ ಜಮೀನುಗಳನ್ನು ರೈತರಿಗೆ ಹಿಂದಿರುಗಿಸದೇ ಇರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೭ (೨೭೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮಹಾನಗರಗಳ ವರ್ತುಲ ಪ್ರದೇಶಗಳಲ್ಲಿ ಕೈಗಾರಿಕಾಭಿವೃದ್ಧಿಗೆಂದು ರೈತರ ಭೂಮಿಗಳನ್ನು ವಶಪಡಿಸಿಕೊಂಡಿದ್ದು, ಅವುಗಳನ್ನು ಕೈಗಾರಿಕಾಭಿವೃದ್ಧಿ ಮಾಡದೆ ವಶಪಡಿಸಿಕೊಂಡ ರೈತರ ಜಮೀನುಗಳನ್ನು ಅವರಿಗೆ ವಾಪಸ್ಸು ಹಿಂದಿರುಗಿಸದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕೈಗಾರಿಕಾಭಿವೃದ್ಧಿಗೆ ಬಳಸಿಕೊಳ್ಳದೇ ಇರುವ ರೈತರ ಜಮೀನುಗಳನ್ನು ರೈತರಿಗೇ ಹಿಂದಿರುಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಜ್ಯದ ಮಹಾನಗರಗಳಾದ ಬೆಳಗಾವಿ, ಹುಬ್ಬಳ್ಳಿ, ಧಾರವಾಡ ಮತ್ತು ಬೆಂಗಳೂರು ಪ್ರದೇಶ ಹಾಗೂ ಅದರ ವರ್ತುಲ ಪ್ರದೇಶಗಳಲ್ಲಿ ಕೈಗಾರಿಕಾಭಿವೃದ್ಧಿಗಾಗಿ ೨೦೧೩–೧೪ ರಿಂದ ೨೦೧೭–೧೮ರ ವರೆಗೆ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶವನ್ನು ವಶಪಡಿಸಿಕೊಳ್ಳಲಾಗಿದೆ; ಪ್ರತಿ ಹೆಕ್ಟೇರ್‌ಗೆ ಎಷ್ಟು ಮೊತ್ತದ ಹಣವನ್ನು ನಿಗಧಿಪಡಿಸಲಾಗಿತ್ತು ಮತ್ತು ಎಷ್ಟು ಹಣವನ್ನು ಪಾವತಿಸಲಾಗಿದೆ; ಇದರಲ್ಲಿ ಒಪ್ಪಂದದ ಮೇರೆಗೆ ವಶಪಡಿಸಿಕೊಂಡ ಜಮೀನೆಷ್ಟು; ನೇರವಾಗಿ ವಶಪಡಿಸಿಕೊಂಡ ಜಮೀನು ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ವಶಪಡಿಸಿಕೊಂಡ ಒಟ್ಟು ಜಮೀನು ಪ್ರದೇಶದಲ್ಲಿ ಎಷ್ಟು ಹೆಕ್ಟೇರ್ ಪ್ರದೇಶವನ್ನು ಕೈಗಾರಿಕಾಭಿವೃದ್ಧಿಗಾಗಿ ಬಳಸಿಕೊಳ್ಳಲಾಗಿದೆ ; ಇದರಲ್ಲಿ ಕೈಗಾರಿಕಾಭಿವೃದ್ಧಿಗಾಗಿ ಹಂಚಿಕೆಯಾಗಿಯೂ ಅಭಿವೃದ್ಧಿಯಾಗದೆ ಉಳಿದ ಒಟ್ಟು ಪ್ರದೇಶ (ಜಮೀನು) ಎಷ್ಟು; ಹಂಚಿಕೆಯಾಗದೇ ಉಳಿದ ಒಟ್ಟು ಪ್ರದೇಶ (ಜಮೀನು) ಎಷ್ಟು; ಉಳಿದ ಜಮೀನನ್ನು ರೈತರಿಗೆ ಹಿಂದಿರುಗಿಸಲು ಏನು ಕ್ರಮಗಳನ್ನು ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಅಪಘಾತದಿಂದ ಕಾಡುಪ್ರಾಣಿಗಳು ಬಲಿಯಾಗುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೮ (೯೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಕ್ರಮ ವಿದ್ಯುತ್ ಸಂಪರ್ಕ, ಬೇಟೆಗಾರಿಕೆ, ವಾಹನಗಳ ಅಪಘಾತದಿಂದ ಹಾಗೂ ರೈಲಿಗೆ ಸಿಲುಕಿ ಕಾಡು ಪ್ರಾಣಿಗಳು ಬಲಿಯಾಗುತ್ತಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೫–೧೬ನೇ ಸಾಲಿನಿಂದ ಪ್ರಸ್ತುತ ದಿನಗಳವರೆಗೆ ರಾಜ್ಯಾದಾದ್ಯಂತ ಅಕ್ರಮ ವಿದ್ಯುತ್ ಸಂಪರ್ಕ, ಬೇಟೆಗಾರಿಕೆ, ವಾಹನಗಳ ಅಪಘಾತದಿಂದ ಹಾಗೂ ರೈಲಿಗೆ ಸಿಲುಕಿ ಮೃತಪಟ್ಟಿರುವ ಕಾಡು ಪ್ರಾಣಿಗಳ ಸಂಖ್ಯೆ ಎಷ್ಟು; ಅವು ಯಾವುವು;

(ಇ) ಅಕ್ರಮ ವಿದ್ಯುತ್ ಸಂಪರ್ಕ, ಬೇಟೆಗಾರಿಕೆ, ವಾಹನಗಳ ಅಪಘಾತದಿಂದ ಹಾಗೂ ರೈಲಿಗೆ ಸಿಲುಕುತ್ತಿರುವ ಕಾಡು ಪ್ರಾಣಿಗಳನ್ನು ರಕ್ಷಿಸಲು ಸರ್ಕಾರ ಅನುಸರಿಸುತ್ತಿರುವ ಮಾರ್ಗಸೂಚಿಗಳೇನು;

(ಈ) ಈ ಅಪಘಾತಗಳಿಂದ ಕಾಡುಪ್ರಾಣಿಗಳನ್ನು ರಕ್ಷಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು?

## ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೯ (೯೯೩) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಪ ನೋಂದಣಾಧಿಕಾರಿ (ಸಬ್ ರಿಜಿಸ್ಟ್ರಾರ್) ಕಛೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮಧ್ಯವರ್ತಿ ಹಾವಳಿ ತಡೆಗಟ್ಟುವಂತೆ ಈವರೆಗೂ ಸರ್ಕಾರಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಅವು ಯಾವುವು;

(ಇ) ಸದರಿ ಮಧ್ಯವರ್ತಿ ಹಾವಳಿಗೆ ನಿರ್ಬಂಧ ಹೇರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೆ.ಐ.ಎ.ಡಿ.ಬಿ. ವತಿಯಿಂದ ಹಂಚಿಕೆಯಾದ ನಿವೇಶನಗಳಿಗೆ ಹಣ ಪಾವತಿಸದಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೦ (೧೯೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ಹಂಚಿಕೆಯಾದ ನಿವೇಶನಗಳಿಗೆ ಸಕಾಲದಲ್ಲಿ ಹಣ ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೫–೧೬ನೇ ಸಾಲಿನಿಂದ ಪ್ರಸಕ್ತ ದಿನಗಳವರೆಗೆ ಕೆ.ಐ.ಎ.ಡಿ.ಬಿ. ವತಿಯಿಂದ ಹಂಚಿಕೆಯಾಗಿರುವ ನಿವೇಶನಗಳ ಸಂಖ್ಯೆ ಎಷ್ಟು; ಅವು ಯಾವುವು; (ಕೈಗಾರಿಕಾ ಪ್ರದೇಶವಾರು ಮಾಹಿತಿ ಒದಗಿಸುವುದು)

(ಇ) ೨೦೧೫–೧೬ನೇ ಸಾಲಿನಿಂದ ಪ್ರಸಕ್ತ ದಿನಗಳವರೆಗೆ ನಿವೇಶನ ಹಂಚಿಕೆಯಾಗಿ ಮೊತ್ತ ಪಾವತಿಸದ ನಿವೇಶನ ಹಂಚಿಕೆದಾರರ ಸಂಖ್ಯೆ ಎಷ್ಟು; ಅವು ಯಾವುವು; (ಕೈಗಾರಿಕಾ ಪ್ರದೇಶವಾರು ಮಾಹಿತಿ ಒದಗಿಸುವುದು)

(ಈ) ಕೆ.ಐ.ಎ.ಡಿ.ಬಿ. ವತಿಯಿಂದ ನಿವೇಶನ ಹಂಚಿಕೆಯಾದ ನಂತರದಲ್ಲಿ ಹಣ ಪಾವತಿ ಮಾಡದ ಉದ್ಯಮಿಗಳು ಹಾಗೂ ನಿವೇಶನ ಹಂಚಿಕೆದಾರರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

(ಉ) ಹಂಚಿಕೆಯಾದ ನಿವೇಶನಗಳಿಗೆ ಕೂಡಲೇ ಹಣ ಪಾವತಿ ಮಾಡುವಂತೆ ಸರ್ಕಾರ ಅನುಸರಿಸುತ್ತಿರುವ ಮುಂಜಾಗ್ರತಾ ಕ್ರಮಗಳೇನು?

## ಅಕ್ರಮ ಗಣಿಗಾರಿಕೆಯಿಂದ ಸರ್ಕಾರಕ್ಕೆ ನಷ್ಟವಾಗುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೧ (೧೯೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಕ್ರಮ ಗಣಿಗಾರಿಕೆ, ಕಲ್ಲುಗಾರಿಕೆ (ಬಂಡೆ, ಜಲ್ಲಿ, ಕ್ರಷರ್) ಮತ್ತು ಮರಳುಗಾರಿಕೆಯಿಂದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈವರೆಗೂ ಅಕ್ರಮ ಗಣಿಗಾರಿಕೆ, ಕಲ್ಲುಗಾರಿಕೆ (ಬಂಡೆ, ಜಲ್ಲಿ, ಕ್ರಷರ್) ಮತ್ತು ಮರಳುಗಾರಿಕೆ ವಿರುದ್ಧ ದಾಖಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು; ಅವು ಯಾವುವು; ಇದರಿಂದ ಬಂದ ದಂಡದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅಕ್ರಮ ತಡೆಗಟ್ಟಲು ಸರ್ಕಾರ ಅನುಸರಿಸುತ್ತಿರುವ ಕ್ರಮಗಳೇನು?

## ಕಾರ್ಖಾನೆಗಳಲ್ಲಿ ನೌಕರರಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨ (೧೯೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಖಾನೆಗಳು, ಗಾರ್ಮೆಂಟ್ಸ್ ಫ್ಯಾಕ್ಟರಿಗಳಲ್ಲಿ ದುಡಿಯುವ ನೌಕರರಿಗೆ ಅಲ್ಲಿನ ಆಡಳಿತ ಮಂಡಳಿಗಳು ಮೂಲ ಸೌಲಭ್ಯಗಳು ಹಾಗೂ ವೇತನವನ್ನು ಸರಿಯಾಗಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮೂಲಸೌಕರ್ಯಗಳು ಹಾಗೂ ವೇತನ ನೀಡದ ಕಾರ್ಖಾನೆಗಳ ಮತ್ತು ಗಾರ್ಮೆಂಟ್ಸ್ ಫ್ಯಾಕ್ಟರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು;

(ಇ) ರಾಜ್ಯದಲ್ಲಿ ಎಲ್ಲಾ ತರಹದ ಕಾರ್ಖಾನೆಗಳು, ಗಾಮೆಂಟ್ಸ್ ಫ್ಯಾಕ್ಟರಿಗಳ (ಕೋಳಿ ಫಾರಂಗಳು ಒಳಗೊಂಡಂತೆ) ಒಟ್ಟು ಸಂಖ್ಯೆ ಎಷ್ಟು; ಅವು ಯಾವುವು;

(ಈ) ಇಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; (ಕಾರ್ಖಾನೆವಾರು ಮಾಹಿತಿ ಒದಗಿಸುವುದು)

(ಉ) ಸದರಿ ಕಾರ್ಖಾನೆಗಳು ಮತ್ತು ಗಾರ್ಮೆಂಟ್ಸ್‌ಗಳಲ್ಲಿ ನೌಕರರಿಗೆ ಒದಗಿಸುತ್ತಿರುವ ಮೂಲ ಸೌಲಭ್ಯಗಳು ಮತ್ತು ನಿಗಧಿಪಡಿಸಿರುವ ವೇತನ ಎಷ್ಟು; ಹುದ್ದೆವಾರು ನೀಡುತ್ತಿರುವ ವೇತನದ ವಿವರ ಒದಗಿಸುವುದು ;

(ಊ) ಕಾರ್ಖಾನೆಗಳಲ್ಲಿ ದುಡಿಯುವ ನೌಕರರನ್ನು ಕೆಲಸದಿಂದ ಏಕಾಏಕಿ ತೆಗೆದು ಹಾಕದಂತೆ ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು?

## ಉಡುಪಿ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕ ಇಲಾಖಾ ಕಛೇರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೩ (೨೪೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕ ಇಲಾಖಾ ಕಛೇರಿಗಳು ಎಷ್ಟು; ಮತ್ತು ಯಾವುವು; ಈ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕೊರತೆ ಇರುವ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಮತ್ತು ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ತಾಲ್ಲೂಕುವಾರು, ಕಛೇರಿವಾರು ವಿವರ ನೀಡುವುದು)

(ಆ) ಅಧಿಕಾರಿಗಳಿಗಾಗಿ ಕಛೇರಿಯೇ ಅಥವಾ ಜನರ ಉಪಯೋಗಕ್ಕಾಗಿ ಕಛೇರಿಯೇ ಎನ್ನುವ ಸರ್ಕಾರದ ನಿಲುವಿಗೆ ವಿರುದ್ಧವಾಗಿ ಉಡುಪಿ ಜಿಲ್ಲೆಯ ಕುಂದಾಪುರದಿಂದ ಕಾರ್ಮಿಕ ಇಲಾಖಾ ಕಛೇರಿಯನ್ನು ಸ್ಥಳಾಂತರಗೊಳಿಸಲಾಗಿರುವುದು ಸರ್ಕಾರಕ್ಕೆ ಮಾಹಿತಿ ಇದೆಯೇ; ಇದ್ದಲ್ಲಿ ಸ್ಥಳಾಂತರಗೊಂಡ ಕಛೇರಿಯನ್ನು ಮರಳಿ ಕುಂದಾಪುರದಲ್ಲಿ ಆರಂಭಿಸಲಾಗುವುದೇ; ಇಲ್ಲವಾದಲ್ಲಿ ಕಾರಣವೇನು?

27

## ಉಡುಪಿ ಜಿಲ್ಲೆಯಲ್ಲಿ ಒಂದು ವರ್ಷದಲ್ಲಿ ವಿವಿಧ ಗಣಿಗಾರಿಕೆಗೆ ನೀಡುವ ಪರವಾನಿಗೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪೪ (೨೩೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ನೀಡಲಾದ ವಿವಿಧ ಗಣಿಗಾರಿಕಾ ಪರವಾನಿಗೆಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು; ಕಳೆದ ಒಂದು ವರ್ಷದಲ್ಲಿ ಪುನರ್ ನವೀಕರಣಗೊಂಡ ವಿವಿಧ ಗಣಿಗಾರಿಕಾ ಪರವಾನಿಗೆಗಳು ಎಷ್ಟು; ಮತ್ತು ಅವು ಯಾವುವು; (ತಾಲ್ಲೂಕುವಾರು, ಪರವಾನಿಗೆವಾರು, ಪರವಾನಿಗೆದಾರರ ಹೆಸರು ಹಾಗೂ ವಿಳಾಸದೊಂದಿಗೆ ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಪರವಾನಗೆ ಪಡೆದು ತೆಗೆಯಲ್ಪಟ್ಟ ಮರಳಿನ ಪ್ರಮಾಣವೆಷ್ಟು; ಮತ್ತು ಅಕ್ರಮವಾಗಿ ತೆಗೆದ ಮರಳಿನ ಪ್ರಮಾಣವೆಷ್ಟು; ಅಕ್ರಮ ಮರಳುಗಾರಿಗೆ ಮೇಲೆ ದಾಖಲಾದ ಪ್ರಕರಣಗಳೆಷ್ಟು; ಅವು ಯಾವುವು; ಮತ್ತು ಈ ಅಕ್ರಮ ಮರಳುಗಾರಿಕೆ ಪ್ರಕರಣದಡಿ ಮುಟ್ಟುಗೋಲು ಹಾಕಿಕೊಂಡ ಉಪಕರಣಗಳು ಹಾಗೂ ಸ್ವತ್ತುಗಳ ಸಂಖ್ಯೆ ಎಷ್ಟು; ಅವು ಯಾವುವು;

(ಇ) ವಶಪಡಿಸಿಕೊಂಡ ಮರಳಿನಲ್ಲಿ ಮಾರಾಟ ಮಾಡಿರುವ ಪ್ರಮಾಣವೆಷ್ಟು; ಮತ್ತು ಇದರಿಂದ ಬಂದಿರುವ ಆದಾಯವೆಷ್ಟು; ಈ ಆದಾಯವನ್ನು ಸರ್ಕಾರದ ಯಾವ ಲೆಕ್ಕ ಶೀರ್ಷಿಕೆಯಡಿ ಸಂದಾಯ ಮಾಡಲಾಗಿದೆ; ಮಾರಾಟ ಮಾಡಿ ಉಳಿದಿರುವ ಮರಳಿನ ಪ್ರಮಾಣವೆಷ್ಟು; ಉಳಿಕೆ ಮರಳನ್ನು ಎಲ್ಲಿ ಸಂಗ್ರಹಿಸಿಡಲಾಗಿದೆ? (ತಾಲ್ಲೂಕುವಾರು, ಪ್ರಕರಣವಾರು, ಸೊತ್ತು ವಶಪಡಿಸಿಕೊಂಡಿರುವ ಅಧಿಕಾರಿಯ ಹೆಸರು, ಹುದ್ದೆವಾರು ವಿವರ ನೀಡುವುದು)

# ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿನ ಸಿ.ಆರ್.ಜೆಡ್ ವ್ಯಾಪ್ತಿಯ ಮರಳುಗಾರಿಕೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೫ (೨೪೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಸಿ.ಆರ್.ಜೆಡ್ ವ್ಯಾಪ್ತಿಯಲ್ಲಿ ಮರಳನ್ನು ತೆರವುಗೊಳಿಸಲು ಸರ್ಕಾರ ಕ್ರಮಕೈಗೊಂಡಿದೆಯೇ; ಮತ್ತು ತೆಗೆದುಕೊಳ್ಳಲಾದ ಕ್ರಮಗಳು ಯಾವುವು; ಈ ಮರಳನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ; (ಸಿ.ಆರ್.ಜೆಡ್ ವ್ಯಾಪ್ತಿಯ ಮರಳು ತೆರವಿಗೆ ನೀಡಲಾದ ಆದೇಶದ ಪ್ರತಿ ಒದಗಿಸುವುದು)

(ಆ) ಉಡುಪಿ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ನಾನ್– ಸಿ.ಆರ್.ಜೆಡ್ ವ್ಯಾಪ್ತಿಯಲ್ಲಿ ಮರಳುಗಾರಿಕೆಗೆ ಪರವಾನಗಿ ನೀಡಲಾಗಿದೆ; ಮತ್ತು ಮರಳುಗಾರಿಕೆಗೆ ಪರವಾನಗಿ ಪಡೆದವರ ಸಂಖ್ಯೆ ಎಷ್ಟು ಹಾಗೂ ಯಾರು; ಇವರು ತೆಗೆದ ಮರಳಿನ ಪ್ರಮಾಣವೆಷ್ಟು; (ಪರವಾನಗಿದಾರರ ಹೆಸರು, ವಿಳಾಸ, ಮರಳಿನ ಪ್ರಮಾಣದೊಂದಿಗೆ ವಿವರ ನೀಡುವುದು)

(ಇ) ಕುಂದಾಪುರ ತಾಲ್ಲೂಕಿನ ವರಾಹಿ ನದಿಯನ್ನು ಹೊರತುಪಡಿಸಿ ಉಡುಪಿ ಜಿಲ್ಲೆಯ ಯಾವ ಯಾವ ನದಿಗಳಿಂದ ಸಿಹಿ ನೀರು (ನಾನ್ ಸಿ.ಆರ್.ಜೆಡ್) ಮರಳನ್ನು ತೆಗೆಯಲು ಪರವಾನಗಿ ನೀಡಲಾಗಿದೆ; (ನದಿವಾರು ಪರವಾನಗಿ ಪಡೆದವರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಈ) ರಾಜ್ಯದಲ್ಲಿ ಸಿ.ಆರ್.ಜೆಡ್ ವ್ಯಾಪ್ತಿಯ ಉಪ್ಪುಮಿಶ್ರಿತ ಮರಳನ್ನು ಕಟ್ಟಡ, ಸೇತುವೆ ಮುಂತಾದ ನಿರ್ಮಾಣಗಳಿಗೆ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಮರಳಿನ ಬಳಕೆಯಿಂದ ನಿರ್ಮಿಸಲ್ಪಟ್ಟ ಕಟ್ಟಡ, ಸೇತುವೆ ಮುಂತಾದ ನಿರ್ಮಾಣಗಳ ಬಳಕೆಯ ಮೇಲೆ ಪರಿಣಾಮ ಬೀರುವುದಿಲ್ಲವೇ; ಪರಿಣಾಮ ಬೀರುತ್ತಿದ್ದಲ್ಲಿ, ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು; ಇಲ್ಲವಾದಲ್ಲಿ ಕಾರಣಗಳೇನು?

## ರಾಜ್ಯದಲ್ಲಿ ಐಟಿಐ ಶಿಕ್ಷಣ ಸಂಸ್ಥೆಗಳ ನೌಕರರಿಗೆ ನೀಡಲಾಗುವ ಸೌಲಭ್ಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೬ (೨೩೯) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಿ.ಎಸ್. ಥಾಮಸ್ ವರದಿಯ ಶಿಫಾರಸ್ಸಿನ ಅನ್ವಯ ಖಾಸಗಿ ಅನುದಾನಿತ ಐಟಿಐ ನೌಕರರಿಗೆ ಇತರೇ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನೌಕರರಿಗೆ ನೀಡಲಾಗುತ್ತಿರುವ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; ಇಲ್ಲವಾದಲ್ಲಿ ಕಾರಣವೇನು; (ಪಿ.ಎಸ್.ಥಾಮಸ್ ವರದಿಯ ಪ್ರತಿ ಒದಗಿಸುವುದು)

(ಆ) ರಾಜ್ಯದ ಎಷ್ಟು ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳ ನೌಕರರಿಗೆ ೨೦ ವರ್ಷಗಳ ಕಾಲಮಿತಿ ವೇತನ ಬಡ್ತಿ ನೀಡಲಾಗಿದೆ; ನೀಡಿದಿದ್ದಲ್ಲಿ ಕಾರಣವೇನು; ಮತ್ತು ೨೦ ವರ್ಷದ ಕಾಲಮಿತಿ ವೇತನ ಬಡ್ತಿ ನೀಡಲು ತೆಗೆದುಕೊಳ್ಳುವ ಕ್ರಮಗಳೇನು;

(ಇ) ರಾಜ್ಯದಲ್ಲಿ ಪಿ.ಎಸ್. ಥಾಮಸ್ ವರದಿಯ ಶಿಫಾರಸ್ಸಿಗೆ ಪೂರಕವಾಗಿ ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳಿಗೆ ಪರಿಷ್ಕೃತ ಅನುದಾನ ನೀತಿ ಸಂಹಿತೆ ಸಿದ್ಧಪಡಿಸಲಾಗಿದೆಯೇ; ಸಿದ್ಧಪಡಿಸಲಾಗಿದ್ದಲ್ಲಿ ಇದನ್ನು ಯಾವಾಗ ಜಾರಿಗೆ ತರಲಾಗುವುದು; ಇಲ್ಲವಾದಲ್ಲಿ ಕಾರಣವೇನು; ಹಾಗೂ ಹಿಂದಿನ ಸರ್ಕಾರ ಘೋಷಣೆ ಮಾಡಿರುವ ೬ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ಖಾಸಗಿ ಐಟಿಐ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೂ ಪರಿಷ್ಕೃತ ವೇತನ ನೀಡಲು ಕ್ರಮಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ ಕಾರಣವೇನು?

## ಕಂದಾಯ ಇಲಾಖೆಯ ಹುದ್ದೆಗಳ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೭ (೨೨೪) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಖಾಲಿ ಇರುವ ತಹಶೀಲ್ದಾರರು, ಉಪ ತಹಶೀಲ್ದಾರರು, ಕಂದಾಯ ನಿರೀಕ್ಷಕರು, ಗ್ರಾಮಲೆಕ್ಕಿಗರು, ಪ್ರಥಮ ಮತ್ತು ದ್ವಿತೀಯ ದರ್ಜೆ ಸಹಾಯಕರುಗಳ ಹುದ್ದೆಗಳೆಷ್ಟು; (ತಾಲ್ಲೂಕುವಾರು ಜಿಲ್ಲಾವಾರು ವಿವರ ನೀಡುವುದು)

(ಆ) ನೇರ ನೇಮಕಾತಿಯಿಂದ ಆಯ್ಕೆಯಾದ ಒಟ್ಟು ಎಷ್ಟು ಮಂದಿ ತಹಶೀಲ್ದಾರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಪ್ರಭಾರದಲ್ಲಿರುವವರ ಸಂಖ್ಯೆ ಎಷ್ಟು;

(ಇ) ಗ್ರಾಮ ಲೆಕ್ಕಿಗರು ಮತ್ತು ಕಂದಾಯ ನಿರೀಕ್ಷಕರನ್ನು ಅನ್ಯ ಕಛೇರಿಗಳಿಗೆ ನಿಯೋಜನೆ ಮಾಡುವುದು ಮತ್ತು ಮೂರು–ನಾಲ್ಕು ಗ್ರಾಮಗಳ ಪ್ರಭಾರ ನೀಡುತ್ತಿರುವುದರಿಂದ ಸಾರ್ವಜನಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಖಾಲಿ ಹುದ್ದೆಯಿಂದಾಗಿ ಸಾಮಾಜಿಕ ಭದ್ರತಾ ಯೋಜನೆಗಳು, ಬೆಳೆ ಪರಿಹಾರ ಸೇರಿದಂತೆ ಅನೇಕ ಯೋಜನೆಗಳು ನೈಜ ಫಲಾನುಭವಿಗಳನ್ನು ತಲುಪುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಕನಿಷ್ಟ ಪ್ರತೀ ಗ್ರಾಮಕ್ಕೆ/ಗ್ರಾಮಪಂಚಾಯತ್‌ಗೆ ಒಬ್ಬರಂತೆ ಗ್ರಾಮ ಲೆಕ್ಕಿಗರು ಸೇರಿದಂತೆ ಕಂದಾಯ ಇಲಾಖೆಯ ವಿವಿಧ ಸ್ತರದ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಶೀಘ್ರ ಭರ್ತಿ ಮಾಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಗಾರ್ಮೆಂಟ್ಸ್ ನೌಕರರ ಸೌಲಭ್ಯ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೮ (೧೮೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಗಾರ್ಮೆಂಟ್ಸ್ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಾರ್ಮಿಕರು ತಮ್ಮ ವೇತನಕ್ಕಾಗಿ ಮುಷ್ಕರ ನಿರತರಾಗಿದ್ದು, ಸರ್ಕಾರ ಅವರ ಸಮಸ್ಯೆಗಳನ್ನು ಪರಿಹಾರ ಮಾಡಲು ಕೈಗೊಂಡ ಕ್ರಮಗಳೇನು;

(ಇ) ಗಾರ್ಮೆಂಟ್ಸ್ ನೌಕರರಿಗೆ ನೀಡುವ ಕನಿಷ್ಠ ವೇತನ ಎಷ್ಟು;

(ಈ) ೨೦೧೮ರ ಫೆಬ್ರವರಿಯಲ್ಲಿ ಹೊರಡಿಸಿದ್ದ ಕನಿಷ್ಠ ವೇತನದ ಆದೇಶವನ್ನು ಸರ್ಕಾರ ವಾಪಸ್ ಪಡೆದಿದೆ ಎಂಬ ಸುದ್ದಿ ನಿಜವೇ;

(ಉ) ಗಾರ್ಮೆಂಟ್ಸ್ ಕಾರ್ಮಿಕರಿಗೆ, ಕಾರ್ಮಿಕ ಇಲಾಖೆ ನಿಗಧಿಪಡಿಸಿದ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ; ಇಲ್ಲವಾದಲ್ಲಿ ಸರ್ಕಾರ ಈ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು?

## ಬೀದರ್ ಜಿಲ್ಲೆಯ ಮುಜರಾಯಿ ದೇವಸ್ಥಾನದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೯ (೧೮೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಶ್ರೀ ನರಸಿಂಹ ಝರಣಿ/ಮೈಲಾರ್ ಮಲ್ಲಣ್ಣಾ ದೇವಸ್ಥಾನ, ಜಿಲ್ಲೆಯ ಇತರ ದೇವಸ್ಥಾನಗಳ ಅಭಿವೃದ್ಧಿ ಹಾಗೂ ಭಕ್ತಾದಿಗಳ ಸೌಲಭ್ಯಕ್ಕಾಗಿ ಕಳೆದ ೫ ವರ್ಷಗಳಲ್ಲಿ ಘೋಷಣೆಯಾದ ಯೋಜನೆಗಳಾವುವು; ಇವುಗಳಲ್ಲಿ ಮಂಜೂರಾದ ಯೋಜನೆಗಳು ಯಾವುವು; ಈ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು; ಬಳಕೆಯಾಗಿರುವ ಅನುದಾನ ಎಷ್ಟು;

(ಆ) ಜಿಲ್ಲೆಯ ದೇವಸ್ಥಾನದ ಭಕ್ತಾದಿಗಳಿಗಾಗಿ ಯಾವ್ಯಾವ ಮೂಲ ಸೌಲಭ್ಯಗಳನ್ನು ನೀಡಲಾಗಿದೆ;

(ಇ) ಬೀದರ್ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಬರುವ ದೇವಸ್ಥಾನಗಳಲ್ಲಿ ಎಲ್ಲಿಯೂ ಮೂಲಸೌಲಭ್ಯಗಳಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಐ.ಟಿ.ಐ. ಕಾಲೇಜುಗಳಲ್ಲಿ ಮೂಲ ಸೌಕರ್ಯಗಳ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೦ (೧೮೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು; (ಹೆಸರು, ವಿಳಾಸ ಅವುಗಳಲ್ಲಿ ಬೋಧಿಸುತ್ತಿರುವ ವಿಷಯಗಳು, ವಿಷಯವಾರು ಒದಗಿಸಿರುವ ಮೂಲ ಸೌಕರ್ಯಗಳು, ಖಾಯಂ ಹಾಗೂ ತಾತ್ಕಾಲಿಕ ಹುದ್ದೆಗಳ ವಿವರ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಒದಗಿಸುವುದು)

(ಆ) ಮೂಲ ಸೌಕರ್ಯ ನೀಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಇ) ೨೦೧೫–೧೬ ರಿಂದ ೨೦೧೭–೧೮ನೇ ಸಾಲಿನಲ್ಲಿ ಆರಂಭಿಸಿರುವ ಹೊಸ ಐ.ಟಿ.ಐ. ಕಾಲೇಜುಗಳಿಗೆ ಪ್ರಾಯೋಗಿಕ ಪಾಠದ ಸಲುವಾಗಿ ಸಲಕರಣೆಗಳನ್ನು ಹಾಗೂ ಯಂತ್ರೋಪಕರಣಗಳನ್ನು ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ಒದಗಿಸಲಾಗುವುದು?

## ಪೋಡಿ ಅರ್ಜಿಗಳ ಬಾಕಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧ (೧೮೮) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಬಾಕಿ ಇರುವ ಒಟ್ಟು ಪೋಡಿ ಅರ್ಜಿಗಳೆಷ್ಟು; ಈ ಪೈಕಿ ಕಳೆದ ಮೂರು ವರ್ಷಗಳಿಂದ ಬಾಕಿ ಇರುವ ಅರ್ಜಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎ.ಡಿ.ಎಲ್.ಆರ್. ಆದೇಶ ಮಾಡಿದ ನಂತರವು ಸ್ಕೆಚ್ ಆಗದೆ, ಪಹಣೆಯಲ್ಲಿ ನಮೂದಾಗದೆ, ಇತ್ಯರ್ಥವಾಗದೆ ಬಾಕಿ ಇರುವ ಅರ್ಜಿಗಳೆಷ್ಟು; (ಅರ್ಜಿವಾರು ಸಂಪೂರ್ಣ ವಿವರ ನೀಡುವುದು)

(ಇ) ಪೋಡಿ ಅರ್ಜಿಗಳನ್ನು ಸಕಾಲಕ್ಕೆ ವಿಲೇವಾರಿ ಮಾಡದ ಎಷ್ಟು ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯ ತಾಲ್ಲೂಕು ಸರ್ವೆ ಶಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಈ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಹಾಲಿ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ? (ಸಿಬ್ಬಂದಿಗಳ ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿನ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನಗಳ ಸ್ವತ್ತುಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೨ (೨೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ಅಡಿಯಲ್ಲಿ ಬರುವ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನದ ಒಟ್ಟು ಸ್ವತ್ತುಗಳು ಎಷ್ಟು; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ದೇವಸ್ಥಾನಕ್ಕೆ ಸೇರಿರುವ ಸ್ವತ್ತುಗಳಲ್ಲಿ ಯಾವುದಾದರೂ ಈ ಹಿಂದೆ ಭೂಸ್ವಾಧೀನವಾಗಿದೆಯೇ; ಆಗಿದ್ದಲ್ಲಿ, ಇದಕ್ಕೆ ಸರ್ಕಾರ/ಸ್ವಾಧೀನಪಡಿಸಿಕೊಂಡಿರುವ ಇಲಾಖೆಯಿಂದ ನೀಡಿರುವ ಪರಿಹಾರ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ದೇವಸ್ಥಾನಕ್ಕೆ ಸೇರಿದ ಸ್ವತ್ತುಗಳು ಎಲ್ಲಾ ನ್ಯಾಯಾಲಯಗಳಲ್ಲಿ ಅಥವಾ ಇತರೆ ಪ್ರಾಧಿಕಾರಗಳ ಮುಂದೆ ಚಾಲ್ತಿಯಲ್ಲಿರುವ ಹಾಗೂ ಇತ್ಯರ್ಥಗೊಂಡಿರುವ ಪ್ರಕರಣಗಳ ಮಾಹಿತಿ ನೀಡುವುದು; ಸರ್ಕಾರ ಆಡಳಿತಾತ್ಮಕವಾಗಿ ದೇವಸ್ಥಾನದ ಎಲ್ಲಾ ಸ್ವತ್ತುಗಳ ಮೇಲೆ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹೊಂಗಸಂದ್ರ ಗ್ರಾಮದ ಸರ್ವೆ ನಂ. ೩೩ಕ್ಕೆ ಸಂಬಂಧಿಸಿದ ಸ್ವತ್ತು ಮುಜರಾಯಿ ಇಲಾಖೆಗೆ ಸೇರಿದ ಸ್ವತ್ತಾಗಿದೆಯೇ; ಸೇರಿದ್ದಲ್ಲಿ ಇಂದಿನ ಸ್ಥಿತಿಗತಿಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು ;

(ಉ) ಬೆಂಗಳೂರು ಉತ್ತರ ತಾಲ್ಲೂಕು, ನೀಲಸಂದ್ರ ಗ್ರಾಮದ ಸರ್ವೆ ನಂ.೭೯ಕ್ಕೆ ಸಂಬಂಧಿಸಿದ ಸ್ವತ್ತು ಮುಜರಾಯಿ ಇಲಾಖೆಗೆ ಸೇರಿದ ಸ್ವತ್ತಾಗಿದೆಯೇ; ಸೇರಿದ್ದಲ್ಲಿ, ಇಂದಿನ ಸ್ಥಿತಿಗತಿಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು?

## ಆಂಧ್ರ ರಾಜ್ಯದಲ್ಲಿರುವ ತಿರುಮಲದಲ್ಲಿರುವ ರಾಜ್ಯ ಸರ್ಕಾರದ ಸ್ವತ್ತುಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೩ (೨೫೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಂಧ್ರ ರಾಜ್ಯದಲ್ಲಿರುವ ತಿರುಮಲ ತಿರುಪತಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ಮಾಲೀಕತ್ವ/ಗುತ್ತಿಗೆ/ಬಾಡಿಗೆಯ ಆಧಾರದಲ್ಲಿ ನಿವೇಶನ ಅಥವಾ ಜಮೀನುಗಳನ್ನು ಹೊಂದಿದೆಯೇ; ಹೊಂದಿದ್ದಲ್ಲಿ ಈ ನಿವೇಶನಗಳ ಸ್ಥಿತಿಗತಿಗಳ ಬಗ್ಗೆ ಸಂಪೂರ್ಣವಾದ ಮಾಹಿತಿಯನ್ನು ನೀಡುವುದು;

(ಆ) ತಿರುಪತಿ ತಿರುಮಲದಲ್ಲಿ ಕರ್ನಾಟಕ ರಾಜ್ಯ ಸರ್ಕಾರದ ಮುಜರಾಯಿ ಇಲಾಖೆಯ ಅಡಿಯಲ್ಲಿ ಅತಿಥಿ ಗೃಹ, ಛತ್ರ, ಸಮುದಾಯ ಭವನ ಇವೆಯೇ; ಹೊಂದಿದ್ದಲ್ಲಿ ಈ ನಿವೇಶನಗಳ ಸ್ಥಿತಿಗತಿಗಳ ಬಗ್ಗೆ ಸಂಪೂರ್ಣವಾದ ಮಾಹಿತಿಯನ್ನು ನೀಡುವುದು;

(ಇ) ಕಳೆದ ೧೦ ವರ್ಷಗಳಲ್ಲಿ ಅತಿಥಿ ಗೃಹ/ತಂಗು ಕೊಠಡಿ/ವಸತಿ ಗೃಹ ಮತ್ತು ಇನ್ನಿತರ ರಾಜ್ಯ ಸರ್ಕಾರಕ್ಕೆ ಸೇರಿದ ಕಟ್ಟಡಗಳು, ಅತಿಥಿ ಗೃಹ ಕೊಠಡಿಗಳಿಗೆ ಸರ್ಕಾರದಿಂದ ವಿಶೇಷ ಹಾಗೂ ವಾರ್ಷಿಕ ದುರಸ್ಥಿ ಹಾಗೂ ಪೀಠೋಪಕರಣಗಳು ಮತ್ತು ಇತರೆ ಸೌಲಭ್ಯಗಳೊಂದಿಗೆ ಅಭಿವೃದ್ಧಿ ಮತ್ತು ನವೀಕರಣಕ್ಕೆ ಎಷ್ಟು ಹಣವನ್ನು ವ್ಯಯ ಮಾಡಲಾಗಿದೆ; (ವಿವರವಾದ ಮಾಹಿತಿಯನ್ನು ಪ್ರತಿ ವರ್ಷದಂತೆ ಪ್ರತ್ಯೇಕವಾಗಿ ನೀಡುವುದು)

(ಈ) ಸ್ವತಂತ್ರ ಪೂರ್ವದಲ್ಲಿ ತಿರುಪತಿ ತಿರುವಲ ದೇವಸ್ಥಾನಕ್ಕೂ ಹಾಗೂ ಕರ್ನಾಟಕ ಆಡಳಿತಕ್ಕೂ ಆಡಳಿತಾತ್ಮಕ ಸಂಬಂಧ ಹಾಗೂ ಯಾವುದಾದರೂ ಒಪ್ಪಂದ ಇದೆಯೇ; ಇದ್ದಲ್ಲಿ, ಸಂಬಂಧಿಸಿದ ಮಾಹಿತಿಯೊಂದಿಗೆ ದಾಖಲೆಗಳನ್ನು ಒದಗಿಸುವುದು;

(ಉ) ಸ್ವಾತಂತ್ರ್ಯ ನಂತರ ತಿರುಮಲ ಮತ್ತು ಆಂಧ್ರ ರಾಜ್ಯ ಸರ್ಕಾರದೊಂದಿಗೆ ಟಿಟಿಡಿ ಸದಸ್ಯರನ್ನು ಒಳಗೊಂಡಂತೆ ಇತರೆ ಬೇರೆ ಬೇರೆ ಆಡಳಿತಾತ್ಮಕ ಸಂಬಂಧಗಳ ಬಗ್ಗೆ ಒಪ್ಪಂದ ಆಗಿದೆಯೇ; ಆಗಿದ್ದಲ್ಲಿ ಆಂಧ್ರ ಸರ್ಕಾರ ಮತ್ತು ಕರ್ನಾಟಕ ಸರ್ಕಾರ ತಿರುಮಲ ತಿರುಪತಿ ದೇವಾಲಯಕ್ಕೆ ಸಂಬಂಧಿಸಿದ ಒಪ್ಪಂದದಂತೆ ನಡೆದುಕೊಳ್ಳುತ್ತಿದ್ದಾರೆಯೇ; ಸಂಬಂಧಿಸಿದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು?

## ಮೈಸೂರು ರಾಜ್ಯ ಹರಿಜನ ಸೇವಕ ಸಂಘಕ್ಕೆ ಮಂಜೂರಾದ ಭೂಮಿಯ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೪ (೨೫೩) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ರಾಜ್ಯ ಹರಿಜನ ಸೇವಕ ಸಂಘಕ್ಕೆ ೧೯೪೦ ರಲ್ಲಿ ಮೈಸೂರು ರಾಜ್ಯ ಸರ್ಕಾರವು ಸರ್ವೆ ನಂ. ೧೭ ರಾಮನಹಳ್ಳಿ, ಬಿಡದಿ ಹೋಬಳಿ ರಾಮನಗರ ಜಿಲ್ಲೆ ಇಲ್ಲಿ ೪೩ ಎಕರೆ ಜಮೀನನ್ನು ಮಂಜೂರು ಮಾಡಲಾಗಿದ್ದು, ಮಂಜೂರಾತಿ ಉದ್ದೇಶ ಮತ್ತು ಷರತ್ತುಗಳೇನು; ಸಂಬಂಧಿಸಿದ ಎಲ್ಲಾ ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಆ) ಮಂಜೂರಾತಿ ಆದೇಶದ ಪ್ರಕಾರ ಸಂಘವು ಯಾವ ರೀತಿಯ ಕಾರ್ಯಕ್ರಮಗಳನ್ನು ಸದರಿ ಜಮೀನಿನಲ್ಲಿ ಅನುಷ್ಠಾನಕ್ಕೆ ತಂದಿದೆ; ಸಂಬಂಧಿಸಿದ ಎಲ್ಲಾ ದಾಖಲಾತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಇ) ಜಮೀನು ಮಂಜೂರಾತಿ ಉದ್ದೇಶ ಅನುಷ್ಠಾನಕ್ಕೆ ಕಾಲಮಿತಿ ನಿಗಧಿಪಡಿಸಲಾಗಿತ್ತೆ; ಇಂದಿನ ಸ್ಥಿತಿಗತಿಗಳ ಬಗ್ಗೆ ಸಂಬಂಧಿಸಿದ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು;

(ಈ) ಈ ಜಮೀನಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕಾರ್ಪೋರೇಷನ್ ನಿಂದ ಹರಿಜನರಿಗೆ ಗೃಹ ಸಂಕೀರ್ಣವನ್ನು ನಿರ್ಮಿಸುವ ಉದ್ದೇಶ ಇದೆಯೇ; ಇದ್ದಲ್ಲಿ ಸಂಬಂಧಿಸಿದ ದಾಖಲಾತಿಗಳೊಂದಿಗೆ ವಿವರವಾದ ಮಾಹಿತಿ ನೀಡುವುದು?

## ಅಕ್ರಮ ಮರಳು ಗಣಿಗಾರಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೫ (೧೯೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅತಿಯಾದ ಮರಳು ಗಣಿಗಾರಿಕೆಯಿಂದ ನದಿ ಪಾತ್ರದಲ್ಲಿ ತೀವ್ರ ತರದ ನೆರೆ ಮತ್ತಿತರ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ೩ ತಿಂಗಳಿನಲ್ಲಿ ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆಯ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮರಳು ಗಣಿಗಾರಿಕೆಗೆ ಇರುವ ಮಾನದಂಡಗಳೇನು; ಕಳೆದ ೫ ವರ್ಷಗಳಲ್ಲಿ ಎಷ್ಟು ಸ್ಥಳಗಳಲ್ಲಿ ಮರಳು ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ; ಈ ಗಣಿಗಾರಿಕೆಯಿಂದ ಎಷ್ಟು ಟನ್ ಮರಳನ್ನು ಗಣಿಗಾರಿಕೆ ಮಾಡಲಾಗಿದೆ;

(ಈ) ಕಳೆದ ೫ ವರ್ಷಗಳಲ್ಲಿ ಯಾವ ಯಾವ ಕಂಪನಿ ಅಥವಾ ವ್ಯಕ್ತಿಗಳಿಗೆ ಮರಳು ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅರಣ್ಯ ರಕ್ಷಕರಿಗೆ ವೇತನ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೬ (೧೯೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅರಣ್ಯ ಪ್ರದೇಶವೆಷ್ಟು; ಇದರಲ್ಲಿ ಕಾಯ್ದಿಟ್ಟ ಅರಣ್ಯ ಪ್ರದೇಶಗಳ ವಿಸ್ತಾರವೆಷ್ಟು; (ಜಿಲ್ಲಾವಾರು, ಶೇಕಡಾವಾರು ಮಾಹಿತಿ ನೀಡುವುದು)

(ಆ) ಅರಣ್ಯ ರಕ್ಷಕರಿಗೆ ಎಷ್ಟು ವೇತನ ನೀಡಲಾಗುತ್ತಿದೆ; ರಾಜ್ಯದಲ್ಲಿರುವ ಒಟ್ಟು ಅರಣ್ಯ ರಕ್ಷಕರ ಸಂಖ್ಯೆ ಎಷ್ಟು; ಇವರಲ್ಲಿ ಖಾಯಂ ನೌಕರರ ಹಾಗೂ ಗುತ್ತಿಗೆ ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಜನ ಸಂಖ್ಯೆ ಮತ್ತು ಮರಗಳ ಅನುಪಾತವೆಷ್ಟು; ವನಮಹೋತ್ಸವದ ಮೂಲಕ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿದೆ; ಅದರಲ್ಲಿ ಪ್ರಸ್ತುತ ಇರುವ ಗಿಡಗಳ ಸಂಖ್ಯೆ ಎಷ್ಟು?

## ಕೇಂದ್ರ ಸರ್ಕಾರದ ಸ್ಟಾರ್ಟ್‌ಆಫ್ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೭ (೧೯೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಕೇಂದ್ರ ಸರ್ಕಾರದ ಸ್ಟಾರ್ಟ್‌ಆಫ್ ಯೋಜನೆಯ ಅನ್ವಯ ರಾಜ್ಯದಲ್ಲಿ ಹೊಸದಾಗಿ ಎಷ್ಟು ಹೊಸ ಕಂಪನಿ ಪ್ರಾರಂಭವಾಗಿವೆ; ಇದರಿಂದ ಎಷ್ಟು ಜನರಿಗೆ ಉದ್ಯೋಗ ದೊರೆತಿದೆ;

(ಆ) ರಾಜ್ಯದಲ್ಲಿ ಸ್ಟಾರ್ಟ್‌ಆಫ್‌ಗಳು ಯಾವ ಯಾವ ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪ್ರಾರಂಭವಾಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಮುದ್ರಾ ಯೋಜನೆಯ ಅನ್ವಯ ಸಾಲವನ್ನು ಪಡೆದು ಪ್ರಾರಂಭವಾದ ಸ್ಟಾರ್ಟ್‌ಆಫ್‌ಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನಗಳಲ್ಲಿನ ಸ್ಟಾರ್ಟ್‌ಆಫ್‌ಗಳ ಸಂಖ್ಯೆ ಎಷ್ಟು?

## ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೮ (೧೯೬) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಕೇಂದ್ರಗಳನ್ನು ತೆರೆಯಲಾಗಿದೆ ; ಈ ಕೇಂದ್ರಗಳಲ್ಲಿ ಎಷ್ಟು ವಿಷಯಗಳ ಬಗ್ಗೆ ತರಬೇತಿ ನೀಡಲಾಗುತ್ತಿದೆ ; ಈ ತರಬೇತಿ ಕೇಂದ್ರಗಳಿಂದ ಕಳೆದ ೪ ವರ್ಷಗಳಲ್ಲಿ ಎಷ್ಟು ಅಭ್ಯರ್ಥಿಗಳು ತರಬೇತಿ ಹೊಂದಿರುತ್ತಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರತಿ ತಾಲ್ಲೂಕು ಮಟ್ಟದಲ್ಲಿ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಕೇಂದ್ರಗಳನ್ನು ತೆರೆಯುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಹಾಗಿದ್ದಲ್ಲಿ, ಕಳೆದ ೪ ವರ್ಷಗಳಲ್ಲಿ ಕೇಂದ್ರ ಸರ್ಕಾರವು ಒದಗಿಸಿರುವ ಅನುದಾನ ಎಷ್ಟು ?

## ರಾಜ್ಯದ ಮುಜರಾಯಿ ದೇವಸ್ಥಾನಗಳ ಆದಾಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೯ (೨೦೦) ಮಾನ್ಯ ಗಣಿ ಮತ್ತು ಭೂ–ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮುಜರಾಯಿ ದೇವಸ್ಥಾನಗಳಿಂದ ಬರುವ ಆದಾಯವನ್ನು ಆ ದೇವಸ್ಥಾನದ ಹತ್ತಿರದಲ್ಲಿರುವ ಕಡಿಮೆ ಆದಾಯವಿರುವ ದೇವಸ್ಥಾನಗಳ ಅಭಿವೃದ್ಧಿ ಕಾರ್ಯಗಳಿಗೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿರುವ ಅರ್ಚಕರಿಗೆ ನೀಡುತ್ತಿರುವ ವೇತನವೆಷ್ಟು ; ಅದನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಅರ್ಚಕರನ್ನು ಖಾಯಂ ನೌಕರರೆಂದು ಪರಿಗಣಿಸಲಾಗಿದೆಯೇ ; ಅರ್ಚಕರಿಗೆ ಪಿಂಚಣಿ ಮತ್ತು ಇತರ ನಿವೃತ್ತಿ ವೇತನ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಇ) ಕುಕ್ಕೆ ಸುಬ್ರಮಣ್ಯ ದೇವಸ್ಥಾನದಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಮತ್ತು ಭಕ್ತರ ಅನುಕೂಲಕ್ಕಾಗಿ ಸರ್ಕಾರವು ಯಾವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದೆ ; ಈ ದೇವಸ್ಥಾನದ ವಾರ್ಷಿಕ ಆದಾಯವೆಷ್ಟು ; ಇದರಲ್ಲಿ ಈ ದೇವಸ್ಥಾನದ ಅಭಿವೃದ್ಧಿಗೆ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗುತ್ತಿದೆ ?

## ಮಾಸಾಶನ ವಿತರಣೆಯಲ್ಲಿ ವಿಳಂಬ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೦ (೧೮೦) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ ಜಿಲ್ಲೆ, ರೋಣ ಪಟ್ಟಣ, ಕಲ್ಯಾಣನಗರದ ಕುಷ್ಠರೋಗಿ ನಿವಾಸಿಯೊಬ್ಬರಿಗೆ ಕಳೆದ ೮ ತಿಂಗಳಿಂದ ಮಾಸಾಶನ ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಮಾಸಾಶನ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಬಂದಿದ್ದಲ್ಲಿ ಕಾಲಮಿತಿಯೊಳಗೆ ಇಲ್ಲದಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು ಈ ನಿಟ್ಟಿನಲ್ಲಿ ಸರ್ಕಾರದ ನಿರ್ಧಾರವೇನು ; (ಪೂರ್ಣ ವಿವರ ನೀಡುವುದು)

(ಆ) ಸರ್ಕಾರದ ಉತ್ತಮವಾದ ಇಂತಹ ಪ್ರೋತ್ಸಾಹದಾಯಕ ಯೋಜನೆಗಳನ್ನು ವಿಫಲಗೊಳಿಸುವ ಫಲಾನುಭವಿಗಳನ್ನು ಗುರುತಿಸುವಲ್ಲಿ ಅಸಡ್ಡೆ ತೋರುವ, ವಿಳಂಬ ಮಾಡುವ, ಅಥವಾ ವಿನಾಕಾರಣ ತೊಂದರೆಯನ್ನುಂಟು ಮಾಡುವಂತ ಅಧಿಕಾರಿ / ನೌಕರರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಈ ಪ್ರಕರಣದಲ್ಲಿ ಆದಂತಹ ವಿಳಂಬ ಧೋರಣೆಯ ಬಗ್ಗೆ ವಿಚಾರಣೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ?

## ವಾಯು ಮಾಲಿನ್ಯ ಪ್ರಮಾಣವನ್ನು ಇಳಿಕೆ ಮಾಡುವ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧ (೧೮೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಮಿತಿಮೀರಿದ ರಾಸಾಯನಿಕ ಮತ್ತು ಧೂಳಿನ ಕಣದಿಂದಾಗಿ ವಾಯು ಮಾಲಿನ್ಯ ಹೆಚ್ಚಾಗುತ್ತಿದ್ದು, ನಿಯಂತ್ರಣ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಆ) ನಾನಾ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿದರೂ ವಾಯು ಮಾಲಿನ್ಯ ಪ್ರಮಾಣ ಇಳಿಕೆಯಾಗಲು ಸಾಧ್ಯವಾಗುತ್ತಿಲ್ಲವಾದ ಕಾರಣ ಸ್ಪಷ್ಟವಾದ ಕಾನೂನು ರೂಪಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ಕಟ್ಟಡ ಕಾಮಗಾರಿ, ವಾಹನಗಳ ಹೊಗೆ ಮತ್ತು ರಸ್ತೆ ಗುಂಡಿಗಳಿಂದ ಏಳುವ ಧೂಳಿನ ಪ್ರಮಾಣವು ಅಧಿಕವಾಗಿರುವುದರಿಂದ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ನೌಕರರಿಗೆ ಕಾಲಬದ್ಧ ಮುಂಬಡ್ತಿ ಸೌಲಭ್ಯ ನೀಡುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):–**

೧೮೨ (೨೩೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿ.ಎಸ್. ಥಾಮಸ್ ವರದಿ ಅನ್ವಯ ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ನೌಕರರಿಗೆ ಕಾಲಬದ್ಧ (೧೦.೧೫.೨೦ ವರ್ಷಗಳ ಟೈಂಬಾಂಡ್ ಬಡ್ತಿ) ಸೌಲಭ್ಯ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಸರ್. ಸಿದ್ದಪ್ಪ ಕಂಬಳಿ ಸ್ಮಾರಕ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಗದಗ, ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಶಿವಬಸವ ನಗರ, ಬೆಳಗಾವಿ, ಈ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಯವರಿಗೆ ೧೦.೧೫.೨೦ ವರ್ಷದ ಟೈಂಬಾಂಡ್ ನೀಡದೇ ಇರಲು ಕಾರಣಗಳೇನು ;

(ಇ) ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ ನೌಕರರಿಗೆ ನಿವೃತ್ತಿ ಸೌಲಭ್ಯ ನೀಡುವಲ್ಲಿ ಕೂಡಾ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಇನ್ನೂ ಇತ್ಯರ್ಥವಾಗದೇ ಉಳಿದಿರುವ ಕಡತಗಳನ್ನು ವಿಲೇವಾರಿ ಮಾಡಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ೨೦೧೧ನೇ ಸಾಲಿನಲ್ಲಿ ನೇಮಕಗೊಂಡಿರುವ ಕಿರಿಯ ತರಬೇತಿದಾರರ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೩ (೨೩೫) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೧ನೇ ಸಾಲಿನಲ್ಲಿ ನೇಮಕಗೊಂಡಿರುವ ಕಿರಿಯ ತರಬೇತಿ ಅಧಿಕಾರಿಗಳ ಖಾಯಂ ಪೂರ್ವ ಅವಧಿ ಘೋಷಣೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಘೋಷಣೆ ಮಾಡುವುದು ಯಾವಾಗ ;

(ಆ) ಸದರಿ ಕಾರ್ಮಿಕರ ಪೈಕಿ ಕೆಲವರು ಅಕಾಲಿಕ ಮರಣ ಹೊಂದಿದ್ದು ಅವರು ಕುಟುಂಬಗಳಿಗೆ ಯಾವುದೇ ಸವಲತ್ತುಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

# ಮುಜರಾಯಿ ಇಲಾಖೆಯ ಆರ್ಯವೈಶ್ಯ ಸಮುದಾಯದ ದೇವಸ್ಥಾನಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೪೪ (೨೩೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ಆಡಳಿತಕ್ಕೊಳಪಟ್ಟ ಆರ್ಯವೈಶ್ಯ ಸಮುದಾಯಕ್ಕೆ ಸೇರಿದ ವಾಸವಿ ಕನ್ನಿಕಾ ಪರಮೇಶ್ವರಿ / ನಗರೇಶ್ವರ ದೇವಸ್ಥಾನಗಳ ಸಂಖ್ಯೆ ಎಷ್ಟು ; ಮತ್ತು ಅವು ಯಾವ–ಯಾವ ಶ್ರೇಣಿಗಳಿಗೆ ಒಳಪಟ್ಟಿವೆ ;

(ಆ) ಸದರಿ ಆರ್ಯವೈಶ್ಯ ಸಮುದಾಯಕ್ಕೆ ಸೇರಿದ ವಾಸವಿ / ಕನ್ಯಕಾ ಪರಮೇಶ್ವರಿ / ನಗರೇಶ್ವರ ದೇವಾಲಯಗಳನ್ನು ಯಾವ–ಯಾವ ಮಾನದಂಡಗಳ ಆಧಾರದ ಮೇಲೆ ಮುಜರಾಯಿ ಇಲಾಖೆಯ ಆಡಳಿತಕ್ಕೊಳಪಡಿಸಲಾಗಿದೆ ;

(ಇ) ಸದರಿ ದೇವಸ್ಥಾನಗಳ ಆಡಳಿತ ಮಂಡಳಿಯ ಗಮನಕ್ಕೆ ಬಾರದೇ ಯಾವುದೇ ಲಿಖಿತ ಸೂಚನೆಯನ್ನು ನೀಡದೆ ಇಲಾಖೆಯು ನಾಮಫಲಕಗಳನ್ನು ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಆರ್ಯವೈಶ್ಯ ಸಮುದಾಯಕ್ಕೆ ಸೇರಿದ ವಾಸವಿ / ಕನ್ಯಕಾ ಪರಮೇಶ್ವರಿ / ನಗರೇಶ್ವರ ದೇವಸ್ಥಾನಗಳಿಗೆ ಸರ್ಕಾರವು ವಾರ್ಷಿಕವಾಗಿ ತಸ್ತೀಕು ಹಣವನ್ನು ಮಂಜೂರು ಮಾಡಲಾಗುತ್ತದೆಯೇ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಸರ್ಕಾರಿ ಜಾಗಗಳಲ್ಲಿ ಮನೆ ಕಟ್ಟಿಕೊಂಡಿರುವವರಿಗೆ ಸಕ್ರಮ ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫ (೨೩) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಜಾಗಗಳಲ್ಲಿ ಅಕ್ರಮವಾಗಿ ಮನೆ ಕಟ್ಟಿಕೊಂಡಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅಕ್ರಮವಾಗಿ ಸರ್ಕಾರಿ ಜಾಗಗಳಲ್ಲಿ ಮನೆ ಕಟ್ಟಿಕೊಂಡವರು ಕಂದಾಯಕ್ಕೆ ಒಳಪಡದವರಿಗೆ ಸಕ್ರಮ ಮಾಡಲು ಅರ್ಜಿ ಸಲ್ಲಿಸಲು ಅವಕಾಶ ಇದೆಯೇ ;

(ಇ) ಇಲ್ಲವೆಂದಾದಲ್ಲಿ ಸಕ್ರಮ ಮಾಡಲು ಯಾವ ಕ್ರಮ ವಹಿಸಲಾಗುವುದು ;

(ಈ) ಕಂದಾಯ ಒಳಪಡದವರಿಗೆ ಅಕ್ರಮ ಮನೆಗಳನ್ನು ಸಕ್ರಮಗೊಳಿಸಲು ಸರ್ಕಾರದ ಮುಂದಿರುವ ಯೋಜನೆಗಳೇನು ? (ವಿವರ ನೀಡುವುದು)

## ಖಾಸಗಿ ಅನುದಾನಿತ ಐ.ಟಿ.ಐ ಕಾಲೇಜುಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೮೬ (೧೮೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಅನುದಾನಿತ ಐ.ಟಿ.ಐ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾಲೇಜುಗಳಲ್ಲಿ ಯಾವ ಯಾವ ಕೋರ್ಸುಗಳು ಅನುದಾನಕ್ಕೆ ಒಳಪಟ್ಟಿವೆ ;

(ಇ) ಕರ್ನಾಟಕ ರಾಜ್ಯದ ಈ ಅನುದಾನಿತ ಐ.ಟಿ.ಐ ಕಾಲೇಜುಗಳಲ್ಲಿ ಮೊದಲ ಮತ್ತು ಎರಡನೇ ವರ್ಷದಲ್ಲಿ ಕೋರ್ಸ್‌ವಾರು ಎಷ್ಟು ಜನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ; ಈ ಅನುದಾನಿತ ಕೋರ್ಸ್‌ಗಳಲ್ಲಿ ವಿದ್ಯಾರ್ಥಿ–ಉಪನ್ಯಾಸಕರ ಅನುಪಾತ (STUDENT STAFF RATIO) ಎಷ್ಟಿದೆ ; ಈ ಕೋರ್ಸ್‌ಗಳಲ್ಲಿ ಕೆಲಸ ಮಾಡುತ್ತಿರುವ ಉಪನ್ಯಾಸಕರಿಗೆ ಕಾರ್ಯಭಾರ ಎಷ್ಟಿದೆ ;

(ಈ) ಖಾಸಗಿ ಐ.ಟಿ.ಐ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಇರುವ ನಿಯಮಗಳೇನು ;

(ಉ) ಪ್ರಸ್ತುತ ರಾಜ್ಯದ ಅನುದಾನಿತ ಐ.ಟಿ.ಐ ಕಾಲೇಜುಗಳಲ್ಲಿ ಖಾಲಿಯಿರುವ ಭೋಧಕ ಹುದ್ದೆಗಳ ಸಂಖ್ಯೆ ಎಷ್ಟು ; (ಕಾಲೇಜುವಾರು, ಜಿಲ್ಲಾವಾರು ವಿವರ ನೀಡುವುದು)

(ಊ) ಪ್ರಸ್ತುತ ಅನುದಾನಕ್ಕೆ ಒಳಪಡಿಸಲು ಸರ್ಕಾರ ಆಲೋಚಿಸಿದೆಯೇ ; ಇದ್ದಲ್ಲಿ ಯಾವಾಗ ಅನುದಾನಕ್ಕೆ ಒಳಪಡಿಸಲಾಗುವುದು ? (ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ವ್ಯವಸಾಯಕ್ಕೆ ಒಳಪಟ್ಟ ಜಮ್ಮ ಬಾಣೆ ಜಮೀನಿಗೆ ಕಂದಾಯ ನಿಗಧಿ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೭ (೨೦೨) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ವ್ಯವಸಾಯಕ್ಕೆ ಒಳಪಟ್ಟ ಜಮ್ಮ ಬಾಣೆ ಜಮೀನಿಗೆ ಕಂದಾಯ ವಿಧಿಸುವ ಕಡತಗಳನ್ನು ವಿಲೇವಾರಿ ಮಾಡದಿರುವುದರಿಂದ ಜನರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ಕಾಲಮಿತಿಯೊಳಗೆ ಸದರಿ ವಿಷಯದ ಬಗ್ಗೆ ಆದೇಶ ಹೊರಡಿಸಲಾಗುವುದು ಹಾಗೂ ಅನಗತ್ಯ ವಿಳಂಬ ಮಾಡಲು ಕಾರಣಗಳೇನು ?

## ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾಗಿ ಮನೆ ಕುಸಿತ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೮ (೨೦೩) ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸಕ್ತ ವರ್ಷದಲ್ಲಿ ಅತಿವೃಷ್ಟಿಯಿಂದಾಗಿ ಸಂಭವಿಸಿದ ಮನೆ ಕುಸಿತದ ಪ್ರಕರಣಗಳೆಷ್ಟು; ಮನೆಕುಸಿತದ ಪ್ರಕರಣಗಳಲ್ಲಿ ನೀಡುವ ಪರಿಹಾರದ ಮೊತ್ತವೆಷ್ಟು; ಹಾಗೂ ನಿಗಧಿಪಡಿಸಿರುವ ಮಾನದಂಡಗಳೇನು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಪ್ರಸಕ್ತ ವರ್ಷದಲ್ಲಿ ಅತಿವೃಷ್ಟಿಯಿಂದ ಸಂಭವಿಸಿದ ನಷ್ಟದ ಅಂದಾಜು ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಳೆಹಾನಿಯಿಂದ ಸಂಭವಿಸಿದ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹೈದರಬಾದ್ ಕರ್ನಾಟಕದ ಬಾಲ ಕಾರ್ಮಿಕರ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮೯ (೨೨೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ಖಾಸಗಿ ಸಂಸ್ಥೆಗಳ ಕಾರ್ಖಾನೆಗಳಲ್ಲಿ ಬಾಲ ಕಾರ್ಮಿಕರು ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಕಾರ್ಮಿಕರಿಗಾಗಿ ಖರ್ಚು ಮಾಡಿದ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

# ಮಲೆ ಮಹದೇಶ್ವರನ ಬೆಟ್ಟದಲ್ಲಿ ಭಕ್ತಾಧಿಗಳಿಗೆ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೦ (೧೭೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲೆ ಮಹದೇಶ್ವರ ಬೆಟ್ಟದಲ್ಲಿ ಭಕ್ತಾಧಿಗಳ ಅನುಕೂಲಕ್ಕಾಗಿ ಎಷ್ಟು ಕೊಠಡಿಗಳನ್ನು ನಿರ್ಮಿಸಲಾಗುತ್ತಿದೆ. ಈ ಕೊಠಡಿಗಳ ಸಂಪೂರ್ಣ ನಿರ್ಮಾಣ ಕಾರ್ಯ ಯಾವಾಗ ಮುಗಿಯಲಿದೆ ; (ನಿರ್ಮಾಣದ ಅಂದಾಜು ವೆಚ್ಚ, ಕಾಮಗಾರಿಯ ಹಂತ ಇತ್ಯಾದಿ ವಿವರಗಳನ್ನು ಸಲ್ಲಿಸುವುದು)

(ಆ) ಅಂತರ ಗಂಗೆ ಕಲ್ಯಾಣಿ ಅಭಿವೃದ್ಧಿ ಕಾಮಗಾರಿ ಯಾವ ಹಂತದಲ್ಲಿದೆ ; ಇದಕ್ಕೆ ನಿಗಧಿಪಡಿಸಿರುವ ಅಂದಾಜು, ಇದುವರೆಗಿನ ವೆಚ್ಚ, ಕಾಮಗಾರಿಯ ಹಂತದ ಬಗ್ಗೆ ವಿವರ ಒದಗಿಸುವುದು ;

(ಇ) ಮಹದೇಶ್ವರನ ಬೆಟ್ಟದಲ್ಲಿ ಯು.ಜಿ.ಡಿ ಕಾಮಗಾರಿಗಳು ಯಾವ ಹಂತದಲ್ಲಿವೆ ; ಈ ಕಾಮಗಾರಿಗೆ ನಿಗಧಿಪಡಿಸಿರುವ ಅಂದಾಜು ವೆಚ್ಚ, ಕಾಮಗಾರಿಯ ಹಂತ, ಇತ್ಯಾದಿ ವಿವರ ಒದಗಿಸುವುದು ;

(ಈ) ಭಕ್ತಾಧಿಗಳು ಕುಳಿತುಕೊಳ್ಳಲು ನಿರ್ಮಿಸಿರುವ ಷೆಡ್‌ನಲ್ಲಿ ಮಳೆ ನೀರು ನಿಲ್ಲುತ್ತಿರುವುದು, ಸುತ್ತಮುತ್ತಲ ಜಾಗದಲ್ಲಿ ಮಳೆ ಬಂದಾಗ ಕೆಸರು ತುಂಬಿ ಓಡಾಡಲು ಆಗದ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮಳೆ ನೀರು ಸರಾಗವಾಗಿ ಹರಿದು ಹೋಗಲು, ಷೆಡ್ ಒಳಗೆ ನೀರು ನಿಲ್ಲದಿರಲು, ಸುತ್ತಮುತ್ತಲ ಜಾಗದಲ್ಲಿ ನೀರು ನಿಲ್ಲದಂತೆ ಮಾಡಿ ಪರಿಸರ ಸ್ವಚ್ಛವಾಗಿಡಲು ಸೂಕ್ತ ಕ್ರಮ ಜರುಗಿಸಲಾಗುವುದೇ ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

---

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0141/800 ಪ್ರತಿಗಳು/9–07–2018